ವಿಜಯಪುರ । ಸಂಪುಟ 02 । ಸಂಚಿಕೆ 11 । ಪುಟ 4 । ₹ 3.00

https://udayarashminews.com

udayarashmi 7026028778

# ಉದಯರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಮಂಗಳವಾರ, ಫೆಬ್ರವರಿ 27, 2024

ಉದಯರಶ್ಮಿ ದಿನಪತ್ರಿಕೆ

"ವಿಜಯಪುರ ಜಿಲ್ಲೆಯಲ್ಲಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಹೆಸರಿನಲ್ಲಿ ಒಂದು ಸಾವಿರ ಎಕರೆ ಪ್ರದೇಶದಲ್ಲಿ ಅರಣ್ಯ ನಿರ್ಮಿಸಿ ಅಲ್ಲಿ ಮಕ್ಕಳಿಗೆ ಪರಿಸರದ ಬಗ್ಗೆ ಅರಿವು ಮೂಡಿಸಲು ವಿಜ್ಞಾನ ಮತ್ತು ಧ್ಯಾನ ಕೇಂದ್ರ, ತಾರಾಲಯ ಸ್ಥಾಪಿಸಲಾಗುವುದು."

– ಎಂ. ಬಿ. ಪಾಟೀಲ

ಜಿಲ್ಲಾ ಉಸ್ತುವಾರಿ ಸಚಿವರು

**ಇಂದು ರಾಜ್ಯಸಭೆ ಚುನಾವಣೆ । ನಾಲ್ಕು ಸ್ಥಾನಗಳಿಗೆ ನಡೆಯಲಿರುವ ಚುನಾವಣೆಗೆ ಐವರು ಅಭ್ಯರ್ಥಿಗಳು ಸ್ಪರ್ಧೆ**

# ರಾಜ್ಯಸಭೆ ಚುನಾವಣೆ: ಕಾಂಗ್ರೆಸ್‌ಗೆ ಅಡ್ಡ ಮತದಾನ ಭೀತಿ

ಬೆಂಗಳೂರು: ವಿಧಾನಸಭೆಯಿಂದ ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಇಂದು ಸೋಮವಾರ(ಫೆ.27) ಚುನಾವಣೆ ನಡೆಯಲಿದೆ. ಇದಕ್ಕಾಗಿ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮೈತ್ರಿ ಅಭ್ಯರ್ಥಿ ಕಣದಲ್ಲಿ ಇರುವುದರಿಂದ ಚುನಾವಣಾ ಕಣ ರಂಗೇರಿದೆ.

ಕಣದಲ್ಲಿ ಐವರು ಅಭ್ಯರ್ಥಿಗಳು:

ನಾಲ್ಕು ಸ್ಥಾನಗಳಿಗೆ ನಡೆಯಲಿರುವ ಚುನಾವಣೆಗೆ ಐವರು ಅಭ್ಯರ್ಥಿಗಳು ಸ್ಪರ್ಧೆ ಮಾಡಿದ್ದಾರೆ. ಕಾಂಗ್ರೆಸ್‌ನಿಂದ ಅಜಯ್ ಮಾಕನ್, ಜಿಸಿ ಚಂದ್ರಶೇಖರ್, ಡಾ. ಸೈಯದ್ ನಾಸೀರ್ ಹುಸೇನ್, ಬಿಜೆಪಿಯಿಂದ ನಾರಾಯಣ ಎಸ್ ಭಾಂಡಗೆ, ಮೈತ್ರಿ ಅಭ್ಯರ್ಥಿಯಾಗಿ ಡಿ ಕುಪೇಂದ್ರ ರೆಡ್ಡಿ ಕಣದಲ್ಲಿದ್ದಾರೆ.

ವಿಧಾನಸಭೆಯಲ್ಲಿ ಕಾಂಗ್ರೆಸ್ ಬಲಾಬಲ 135 ಇತ್ತು. ಇದೀಗ ರಾಜಾ ವೆಂಕಟಪ್ಪ ನಾಯಕ ಮೃತಪಟ್ಟ ಹಿನ್ನೆಲೆಯಲ್ಲಿ ಸದ್ಯ ಕಾಂಗ್ರೆಸ್ ಬಲ 134 ಆಗಿದೆ. ಇನ್ನು ಬಿಜೆಪಿ 66, ಜೆಡಿಎಸ್ 19 ಸ್ಥಾನಗಳನ್ನು ಹೊಂದಿವೆ. ನಾಲ್ವರು ಪಕ್ಷೇತರ ಶಾಸಕರಿದ್ದಾರೆ.

ಪಕ್ಷೇತರರು ನಾಲ್ವರೂ ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕುವ ಸಾಧ್ಯತೆ ಇದೆ. ವಿಶೇಷವಾಗಿ ಗಾಲಿ ಜನಾರ್ದನ ರೆಡ್ಡಿ ಸೋಮವಾರ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಅವರು ಯಾರನ್ನು ಬೆಂಬಲಿಸಲಿದ್ದಾರೆ ಎಂದು ಅಧಿಕೃತವಾಗಿ ತಿಳಿಸಿಲ್ಲ.



ಕೈ ಶಾಸಕರು ಹೋಟೆಲ್‌ಗೆ ಶಿಫ್ಟ್:

ಬಿಜೆಪಿ-ಜೆಡಿಎಸ್ ಜಂಟಿಯಾಗಿ ಐದನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿರುವುದರಿಂದ ಕಾಂಗ್ರೆಸ್‌ಗೆ ಅಡ್ಡ ಮತದಾನದ ಭೀತಿ ಎದುರಾಗಿದೆ. ಹಾಗಾಗಿ, ಕಾಂಗ್ರೆಸ್ ಶಾಸಕರನ್ನು ಖಾಸಗಿ ಹೋಟೆಲ್‌ಗೆ ಶಿಫ್ಟ್ ಮಾಡಲಾಗಿದೆ ಎಂದು ವರದಿಗಳು ಹೇಳಿವೆ.

ವಿಧಾನಸೌಧದಲ್ಲಿ ಮಾತನಾಡಿದ ಸರ್ಕಾರದ ಮುಖ್ಯ ಸಚೇತಕ ಅಶೋಕ್ ಪಟ್ಟಣ್, "ಎಲ್ಲಾ ಕಾಂಗ್ರೆಸ್ ಶಾಸಕರಿಗೂ ವಿಪ್ ಕೊಟ್ಟಿದ್ದೇವೆ. ಸಂಜೆ 6 ಗಂಟೆಗೆ ಕಡ್ಡಾಯವಾಗಿ ಸಭೆಗೆ ಹಾಜರಾಗಲು ಹೇಳಿದ್ದೇವೆ. ಈ ಕುರಿತಾಗಿ ವಾಟ್ಸಾಪ್‌ಗೆ ಮೆಸೇಜ್ ಕಳಿಸಿದ್ದೇವೆ. ವೈಯಕ್ತಿಕವಾಗಿ ಫೋನ್ ಮಾಡಿ ಹೇಳಿದ್ದೇವೆ. ಎಲ್ಲಾ ಶಾಸಕರು ರಾತ್ರಿ ಹೋಟೆಲ್‌ನಲ್ಲೇ ಉಳಿದುಕೊಳ್ಳುತ್ತೇವೆ. ಲಗೇಜ್ ಸಮೇತ ಎಲ್ಲಾ ಶಾಸಕರು ಬರ್ತಿದ್ದಾರೆ" ಎಂದು ತಿಳಿಸಿದ್ದಾರೆ.

"ನಾಳೆ ಬೆಳಿಗ್ಗೆ ಎಲ್ಲಾ ಶಾಸಕರು ಹೋಟೆಲ್‌ನಿಂದ ಬಸ್‌ನಲ್ಲಿ ಒಟ್ಟಿಗೆ ಬಂದು ಓಟ್ ಹಾಕಿ ಹೋಗುತ್ತೇವೆ. ಓಟಿಂಗ್ ಪ್ಯಾಟ್ರನ್ ಟ್ರೈನಿಂಗ್ ಕೊಡೋಕೆ, ಯಾವ ರೀತಿ ಮಾರ್ಕ್ ಮಾಡಬೇಕು ಎಂದು ಮಾಹಿತಿ ನೀಡಲು ಸಿಎಲ್‌ಪಿ ಸಭೆ ಕರೆಯಲಾಗಿದೆ" ಎಂದು ಹೇಳಿದ್ದಾರೆ.

ರಾಜ್ಯ ಸಭೆಯ ಮತದಾನ ಮಂಗಳವಾರ ಬೆಳಗ್ಗೆ 9ರಿಂದ ಸಂಜೆ 4 ಗಂಟೆಯವರೆಗೆ ನಡೆಯಲಿದೆ. ವಿಧಾನಸೌಧದ 1ನೇ ಮಹಡಿಯ 106 ನೇ ಕೊಠಡಿಯಲ್ಲಿ ಮತದಾನಕ್ಕೆ ವ್ಯವಸ್ಥೆ ಮಾಡಲಾಗಿದೆ.

## ರಾಜ ನುಡಿ

'ಚಮಚ' ಸಿಹಿ ಜೇನೊಳಗಿದ್ದರೂ
ಸಿಹಿಯ ರುಚಿ ತಿಳಿದೀತೇ!
ಆಕಳ ಕೆಚ್ಚಲಿನ ಮೇಲಿರುವ ಉಣ್ಣೆಗೆ
ಹಾಲಿನ ರುಚಿ ಹೊಳೆದೀತೇ!
ಸಹೃದಯರ ನಡುವೆ ಇದ್ದರೂ
ಮೂರ್ಖರಿಗೆ ಸಹೃದಯತೆಯ
ಅರಿವಾದೀತೇ!

–ಡಾ. ರಾಜಶೇಖರ ನಾಗೂರ

## ವಚನ ಚಿಂತನ 310

*ಆಕಾಶಕೊಂಬತ್ತು ಬಾಗಿಲು.*

*ಘಟಾಕಾಶ ಮಠಾವಕಾಶ ದಿಗಾಕಾಶ*
*ಬಿಂದ್ವಾಕಾಶ*
*ಭಿನ್ನಾಕಾಶ ಮಹದಾಕಾಶವೆಂಬ*
*ಆಕಾಶಕೊಂಬತ್ತು ಬಾಗಿಲು.*
*ಹೊಗಲಿಕಸಾಧ್ಯ ಹೊರಹೊಂಡಲಿಕಸಾಧ್ಯ.*
*ಕೂಡಲಚೆನ್ನಸಂಗಾ ನಿಮ್ಮ ಶರಣಂಗೆ*
*ಸಾಧ್ಯವಲ್ಲದೆ*
*ಉಳಿದವರಿಗಸಾಧ್ಯವು.*

– *ಚೆನ್ನಬಸವಣ್ಣನವರು*

ಚೆನ್ನಬಸವಣ್ಣನವರು ಈ ವಚನದ ಮೂಲಕ ಅಂಗಉದಯಿಸಿದ ಪರಿಯನ್ನು ವಿವರಿಸಿದ್ದಾರೆ. ಮಹಾಲಿಂಗದ ಮೂಲಕ ಚೈತನ್ಯವು ವಿವಿಧ ಹಂತಗಳಾದ ಘಟಾಕಾಶ, ಮಠಾವಕಾಶ, ದಿಗಾಕಾಶ, ಬಿಂದ್ವಾಕಾಶ, ಭಿನ್ನಾಕಾಶ, ಮತ್ತು ಮಹದಾಕಾಶಗಳೊಳಗೆ ಪ್ರವಹಿಸಿ ಅಂಗದಲ್ಲಿ ಅಡಗಿ ಪ್ರಾಣಲಿಂಗವಾದ ಬಗೆಯನ್ನು ವಿವರಿಸಿರುವುದು ಆಧುನಿಕ ಖಗೋಳ ವಿಜ್ಞಾನಿಗಳ ಸೃಷ್ಟಿಯ ಉಗಮದ ವಿಚಾರಕ್ಕೆ ಸರಿಹೊಂದುತ್ತದೆ. ಇಲ್ಲಿ ಚೈತನ್ಯ ಪ್ರಾರಂಭದಲ್ಲಿ ಆದಿಮೂಲ ಪರಮಾಣುವಿನಲ್ಲಿ ಅಡಗಿತ್ತು ಎಂದು ವಿಜ್ಞಾನಿಗಳು ಹೇಳಿದ ಪರಿಯನ್ನು ಚನ್ನಬಸವಣ್ಣನವರು ಬಿಂದ್ವಾಕಾಶ ಎಂದಿದ್ದಾರೆ. ಈ ಆದಿಮೂಲ ಪರಮಾಣು(ಕಡಿಟಚಣಿಣತಜ ಚಿಣಠಟ) ಉದಯಿಸಿದ್ದು ಏನು ಏನು ಇಲ್ಲದ ಬಯಲೊಳಗೆ ಇದನ್ನು ಚೆನ್ನಬಸವಣ್ಣನವರು ಮಹದಾಕಾಶ ಎಂದಿರುವರು. ಈ ಚೈತನ್ಯವನ್ನು ಗರ್ಭದಲ್ಲಿ ಅಡಗಿಸಿಕೊಂಡ ಆದಿಮೂಲ ಪರಮಾಣು ಸಿಡಿಯುವಿಕೆಯನ್ನು ವಿಜ್ಞಾನಿಗಳು ಮಹಾಸ್ಫೋಟ ಐರಥಚಟಿರ ಎಂದಿದ್ದರೆ. ಚನ್ನಬಸವಣ್ಣನವರು ಅದನ್ನು ಭಿನ್ನಾಕಾಶ ವೆನ್ನುತ್ತಾರೆ. ಈ ಸ್ಫೋಟದ ನಂತರವೇ ಎಲ್ಲಾ ಆಕಾಶಕಾಯಗಳು, ಕಾಲ ಹಾಗೂ ಬಯಲು ನಿರ್ಮಾಣವಾಯಿತು. ಇದನ್ನು ದಿಗಾಕಾಶ ವೆಂದಿದ್ದಾರೆ ಚೆನ್ನಬಸವಣ್ಣನವರು. ಈ ಪ್ರಕ್ರಿಯೆಯಲ್ಲಿ ಉದಯಿಸಿದ ಗ್ರಹ-ನಕ್ಷತ್ರಗಳ ಮೇಲೆ ಕಾಲಾಂತರದಲ್ಲಿ ಸೂಕ್ತ ವಾತಾವರಣ ನಿರ್ಮಾಣವಾದ ಗ್ರಹಗಳಲ್ಲಿ ಜೀವಿಗಳು ಉದಯಿಸಿದವು ಜೀವಿಗಳ ಉದಯಿಸುವುದಕ್ಕೆ ಸಹಾಯಕವಾದ ವಾತಾವರಣವನ್ನೇ ಚೆನ್ನಬಸವಣ್ಣನವರು ಮಹಾಕಾಶ ಎನ್ನುವುದು. ಜೀವಿಗಳ ಅಂತರಂಗದಲ್ಲಿ ಅಡಗಿದ ಚೈತನ್ಯವನ್ನು ಘಟಕಾಶವೆಂದು ಕರೆಯುತ್ತಾ ಇದೇ ಪ್ರಾಣಲಿಂಗವಾಗಿದೆ. ಈ ರೀತಿಯಾಗಿ ಅಂಗದ ನವದ್ವಾರಗಳ ಮೂಲಕ ಅಡಗಿಕೊಂಡ ಚೈತನ್ಯವನ್ನು ಅರಿತುಕೊಳ್ಳಲು ಅಂತರಂಗ ಪ್ರವೇಶಿಸುವುದು ಅಸಾಧ್ಯ ಪ್ರವೇಶಿಸಿದವರಿಗೆ ಹೊರಬರಲು ಅಸಾಧ್ಯ ಇದು ಶರಣರಲ್ಲದೆ ಮತ್ತಾರಿಗೂ ಸಾಧ್ಯವಿಲ್ಲ ಎನ್ನುತ್ತಾರೆ..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಆಲಮಟ್ಟಿ ರೈಲು ನಿಲ್ದಾಣ ಆಧುನೀಕರಣಕ್ಕೆ ಚಾಲನೆ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಪ್ರಯಾಸದ ಪ್ರಯಾಣವಾಗಿದ್ದ ರೈಲು ಈಗ ಆರಾಮದಾಯಕ ಪ್ರಯಾಣವಾಗುತ್ತಿದೆ. ಇದಕ್ಕೆ ಕಾರಣ ದೇಶದ ಪ್ರಧಾನಿ ನರೇಂದ್ರ ಮೋದಿ ಎಂದು ಮಾಜಿ ಸಚಿವ ಎಸ್. ಕೆ. ಬೆಳ್ಳುಬ್ಬಿ ಅಭಿಪ್ರಾಯಪಟ್ಟರು.

ಆಲಮಟ್ಟಿ ರೈಲು ನಿಲ್ದಾಣದಲ್ಲಿ ಸೋಮವಾರ ನಡೆದ, 15.21 ಕೋಟಿ ರೂ ವೆಚ್ಚದಲ್ಲಿ ಆಲಮಟ್ಟಿ ರೈಲು ನಿಲ್ದಾಣದ ಆಧುನೀಕರಣದ ಚಾಲನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಬಡ, ಮಧ್ಯಮ ವರ್ಗದವರೇ ಹೆಚ್ಚಿನ ಪ್ರಮಾಣದಲ್ಲಿ ಪ್ರಯಾಣಿಸುವ ರೈಲ್ವೆ ಸಾರಿಗೆಯೂ ವಿಮಾನ ಸಾರಿಗೆಯಷ್ಟೇ ಸುಖಕರವಾಗಿರಲಿ ಎನ್ನುವ ಉದ್ದೇಶದಿಂದ ದೇಶಾದ್ಯಂತ ರೈಲು ನಿಲ್ದಾಣ ಹಾಗೂ ರೈಲ್ವೆಯ ಸ್ವರೂಪವನ್ನೇ ಬದಲಾವಣೆ ಮಾಡಲಾಗುತ್ತಿದೆ ಎಂದರು.

ಇಡೀ ದೇಶಾದ್ಯಂತ ಬಹುತೇಕ ರೈಲ್ವೆ ಮಾರ್ಗಗಳು ಡಬಲಿಂಗ್ ಜತೆಗೆ ವಿದ್ಯುದೀಕರಣಗೊಂಡಿವೆ ಎಂದರು. ಸಾಗರಮಾಲಾ, ಪರ್ವತಮಾಲಾ, ಭಾರತಮಾಲಾ ಯೋಜನೆಯಿಂದ ಇಡೀ ದೇಶಾದ್ಯಂತ ಸಾರಿಗೆ ಕ್ಷೇತ್ರದಲ್ಲಿ ಭಾರಿ ಬದಲಾವಣೆಯಾಗಿದೆ ಎಂದರು.

ಗ್ರಾಮ ಪಂಚಾಯ್ತಿ ಅಧ್ಯಕ್ಷೆ ಕವಿತಾ ಬಡಿಗೇರ ಅಧ್ಯಕ್ಷತೆ ವಹಿಸಿದ್ದರು.

ರೈಲ್ವೆ ಅಧಿಕಾರಿ ಎಂ. ಚೇತನಕುಮಾರ, ರೈಲ್ವೆ ಇಲಾಖೆಯ ಹಿರಿಯ ಹಣ-ಕಾಸು ವ್ಯವಸ್ಥಾಪಕ ಜಿ.ಬೂ.ಝಕಾಬ್, ಎಂ.ಚೇತನಕುಮಾರ, ಚಂದ್ರಹಾಸ್, ಜಯಶ್ರೀ ರಾಠೋಡ, ಲಕ್ಷ್ಮೀ ರಾಠೋಡ, ರಮೇಶ ಆಲಮಟ್ಟಿ, ಕಲ್ಲು ಸೊನ್ನದ, ಎನ್.ಎ. ಪಾಟೀಲ, ವಿ.ಎಂ. ಯಾಳವಾರ, ವಸಂತ ಬಳ್ಳೊಳ್ಳಿ, ಮಹಾಂತೇಶ ಹಿರೇಮಠ, ದಶರಥ ಬಂಡಿವಡ್ಡರ, ಪ್ರಶಾಂತ ಗಣಿ, ಪದ್ಮಾವತಿ ಗುಡಿ, ಸಂತೋಷ ಕಡಿ, ಶಿವಾನಂದ ಕೋಳಿ, ಶೇಖರ ಗೂಗಿಹಾಳ ಮತ್ತೀತರರು ಇದ್ದರು.

### ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಶಾಸಕ ಅಶೋಕ ಮನಗೂಳಿ ಸೂಚನೆ

# ರೈತರೊಂದಿಗೆ ಸಹನೆ ಮತ್ತು ಸಮಾಧಾನದಿಂದ ವರ್ತಿಸಿ

ಉದಯರಶ್ಮಿ ನ್ಯೂಸ್

ಸಿಂದಗಿ: ಚಿಮ್ಮಲಗಿ ಏತ ನೀರಾವರಿ ಕಾಲುವೆಯಿಂದ ಸಿಂದಗಿ, ದೇವರ ಹಿಪ್ಪರಗಿ ಮತ್ತು ಆಲಮೇಲ ತಾಲೂಕಿನಲ್ಲಿನ ಕಾಲುವೆಗಳಿಗೆ ಕೆಲವೆ ದಿನದಲ್ಲಿ ನೀರು ಹರಿದು ಬರುತ್ತದೆ. ಅಧಿಕಾರಿಗಳು ಎಚ್ಚೆತ್ತು ಜನ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಅಶೋಕ ಮನಗೂಳಿ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ಭಾನುವಾರ ಹಮ್ಮಿಕೊಂಡ ಕುಡಿಯುವ ನೀರು, ಮೇವು ಸಂಗ್ರಹಣೆ ಹಾಗೂ ಕೆರೆಗಳಿಗೆ ನೀರು ತುಂಬಿಸುವ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಈ ಬಾರಿ ಮಳೆಯ ಪ್ರಮಾಣ ಕಡಿಮೆಯಾಗಿದೆ. ಬೇಸಿಗೆಯ ತೀವ್ರತೆ ಹೆಚ್ಚುತ್ತಿದೆ. ಹರಿದು ಬರುವ ನೀರು ಕೃಷಿ ಕಾರ್ಯಗಳಿಗೆ ಬಳಸದೇ ಜನ ಜಾನುವಾರುಗಳಿಗೆ ಪೂರೈಕೆಯಾಗುವ ಕ್ರಮವನ್ನು ಸಂಬಂಧಿಸಿದ ಅಧಿಕಾರಿಗಳು ನಿರ್ವಹಿಸಬೇಕು. ಫೆ.19ರಂದು ಚಿಮ್ಮಲಗಿ ಏತ ನೀರಾವರಿಯಿಂದ ನೀರನ್ನು ಹರಿಬಿಡಲಾಗಿದೆ. ಕಾರ್ಯನಿಯೋಜನೆ ಮಾಡಿದ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ನೀರನ್ನು ಕೃಷಿಗೆ ಬಳಸದಂತೆ ರೈತರಿಗೆ ತಿಳಿ ಹೇಳಬೇಕು. ಯಾವುದೇ ಕಾಲಕ್ಕೂ ರೈತರೊಂದಿಗೆ ವಾಗ್ವಾದ ಮಾಡುವುದು ಸರಿಯಲ್ಲ. ರೈತರೊಂದಿಗೆ ಸಹನೆ ಮತ್ತು ಸಮಾಧಾನದಿಂದ ವರ್ತಿಸಿ ಕಾರ್ಯನಿರ್ವಹಿಸಬೇಕು ಎಂದರು.



ಕೇವಲ ಕಾಲುವೆಗಳಿಗೆ ನೀರು ಬರುವುದು ಅಷ್ಟೆ ಅಲ್ಲದೇ ಬಾಂದಾ ಮತ್ತು ಹಳ್ಳಕ್ಕೆ ನೀರು ಹರಿದು ಬರುವಂತೆ ಕ್ರಮಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಿಂದಗಿ, ದೇವರ ಹಿಪ್ಪರಗಿ ಮತ್ತು ಆಲಮೇಲ ತಾಲೂಕಿನಾದ್ಯಂತ ಚಾಲ್ತಿಯಲ್ಲಿರುವ ಮತ್ತು ಸ್ಥಗಿತಗೊಂಡಿರುವ ಕುಡಿಯುವ ನೀರಿನ ಮೂಲವಾದ ತೆರೆದ ಭಾವಿ ಮತ್ತು ಕೊಳವೆ ಭಾವಿಗಳು ಮಾಹಿತಿಯನ್ನು ಕೂಡಲೇ ಒದಗಿದಬೇಕು ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗದ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ದೇವರ ಹಿಪ್ಪರಗಿ ಶಾಸಕ ಭೀಮನಗೌಡ (ರಾಜುಗೌಡ) ಪಾಟೀಲ ಮಾತನಾಡಿ, ಕೆರೆಗಳಿಗೆ ಬೇಕಾಗುವ ನೀರು ಇತರೆ ನಾಲಾಗಳಿಗೆ ಪೋಲಾಗದಂತೆ ನೋಡಿಕೊಳ್ಳುವುದು ಹಾಗೆಯೇ ಅಧಿಕಾರಿಗಳು ಸ್ಥಳೀಯವಾಗಿ ಕಾರ್ಯನಿರ್ವಹಿಸಿ ರೈತರಿಂದ ಯಾವುದೇ ರೀತಿಯ ದೂರು ಬಾರದಂತೆ ಮುತವರ್ಜಿಯಿಂದ ಕಾರ್ಯನಿರ್ವಹಿಸಬೇಕು.

ಇದೇ ಸಂದರ್ಭದಲ್ಲಿ ಸಿಂದಗಿ ತಾಲೂಕು ದಂಡಾಧಿಕಾರಿ ಪ್ರದೀಪಕುಮಾರ ಹಿರೇಮಠ, ದೇವರ ಹಿಪ್ಪರಗಿ ತಹಶೀಲ್ದಾರ್ ಪ್ರಕಾಶ ಸಿಂದಗಿ, ತಾಪಂ ಇಒ ರಾಮು ಅಗ್ನಿ, ಕೃಷ್ಣಾಭಾಗ್ಯ ಜಲ ನಿಗಮದ ಮುಖ್ಯ ಅಧೀಕ್ಷಕ ಅಭಿಯಂತರ ಮನೋಜಕುಮಾರ ಸೇರಿದಂತೆ ಸಿಂದಗಿ, ಆಲಮೇಲ ಮತ್ತು ದೇವರ ಹಿಪ್ಪರಗಿ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

"ಆಲಮಟ್ಟಿ ಜಲಾಶಯದಿಂದ ಚಿಮ್ಮಲಗಿ ಏತ ನೀರಾವರಿಗೆ ಪ್ರಸ್ತುತ ಹರಿದು ಬರುವ ನೀರು 300ಕ್ಯೂಸೆಕ್ಸ್ ಪ್ರಮಾಣದಲ್ಲಿದೆ. ಆದರೆ ಈ ಪ್ರಮಾಣದ ನೀರು ಈ ಭಾಗಕ್ಕೆ ಸಾಲುವುದಿಲ್ಲ. 900 ಕ್ಯೂಸೆಕ್ಸ್ ಪ್ರಮಾಣದಲ್ಲಿ ನೀರು ಹರಿದು ಬಂದಲ್ಲಿ ಈ ಭಾಗದ ಜನತೆಗೆ ಅನುಕೂಲವಾಗಲಿದೆ. ಸಂಬಂಧಿಸಿದ ಸಚಿವರಿಗೆ ಮತ್ತು ಅಧಿಕಾರಿಗಳಿಗೆ ಮನವಿ ನೀಡಲಾಗುವುದು."

– ಶಾಸಕ ಅಶೋಕ ಮನಗೂಳಿ

# ಅತ್ಯಾಚಾರ ಯತ್ನದ ಆರೋಪಿಗಳ ಬಂಧನಕ್ಕೆ ಮಾದಿಗರ ಸಂಘ ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಮಾದಿಗರ ಸಂಘ ವಿಜಯಪುರ ವತಿಯಿಂದ ಮುದ್ದೇಬಿಹಾಳ ತಾಲೂಕಿನ ಕವಡಿಮಟ್ಟಿ ಗ್ರಾಮದ ದಲಿತ ಯುವತಿ ದುರ್ಗಮ್ಮ ಮಾದರ ಮೇಲೆ ದೌರ್ಜನ್ಯ ಮತ್ತು ಹಲ್ಲೆ ಮಾಡಿ ಅತ್ಯಾಚಾರಕ್ಕೆ ಯತ್ನಿಸಿದ ಆರೋಪಿಗಳನ್ನು ಬಂದಿಸಲು ಆಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಸಂಘದ ವಿಜಯಪುರ ಜಿಲ್ಲಾಧ್ಯಕ್ಷ ಶ್ರೀಶೈಲ ರತ್ನಾಕರ್ ಮಾತನಾಡಿ ಕವಡಿಮಟ್ಟಿ ಗ್ರಾಮದ ಯುವತಿ ದುರ್ಗಮ್ಮ ಮಾದರ ಬಡ ಕೂಲಿ ಕಾರ್ಮಿಕರಾಗಿದ್ದು ಅದೇ ಗ್ರಾಮದ ಹೊಲದಲ್ಲಿ ಕಬ್ಬು ಕಡಿಯಲು ಕೂಲಿಗೆ ಕೆಲಸಕ್ಕೆ ಹೋದಾಗ ಹೊಲದ ಮಾಲೀಕನ ಸೊಸೆ ಸಾಬವ್ವ ಮಂಜುನಾಥ್ ವಾಲಿಕಾರ, ಸಂಗಪ್ಪ ವಾಲಿಕಾರ, ಬಸಪ್ಪ ಸಂಗಪ್ಪ ವಾಲಿಕಾರ್, ಇವರು ಕ್ಷುಲ್ಲಕ ಕಾರಣ-ಕ್ಕೆ ಯುವತಿಯ ಮೇಲೆ ಹಲ್ಲೆ ಮಾಡಿ ಜಾತಿನಿಂದನೆ ಮಾಡಿರುತ್ತಾರೆ. ಸುರೇಶನು ಕೂಲಿ ಕಾರ್ಮಿಕರ ಎದುರಿನಲ್ಲಿಯೇ ಯುವತಿಯ ಮೇಲೆ ಬಿದ್ದು ಅತ್ಯಾಚಾರಕ್ಕೆ ಯತ್ನಿಸಿದ್ದಾನೆ ಇದಕ್ಕೆ ಅವನ ಸೋದರಿ ಸಾಬವ್ವ ವಾಲಿಕಾರ್ ಸಹಕರಿಸಿರುತ್ತಾಳೆ. ಯುವತಿಯನ್ನು ಅವರ ಸಂಬಂಧಿಕರು ಆಸ್ಪತ್ರೆಗೆ ದಾಖಲಿಸಿ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿದ್ದರೂ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ರವರು ಯಾವುದೇ ಕ್ರಮ ಕೈಗೊಳ್ಳದೆ ದರ್ಪದಿಂದ ಇವರನ್ನೇ ಬೆದರಿಸಿರುತ್ತಾರೆ. ಕಾರಣ ಇವರನ್ನು ಕೂಡಲೇ ಅಮಾನತ್ತು ಮಾಡಬೇಕು ಇಲ್ಲದಿದ್ದರೆ ಜಿಲ್ಲಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು

ಭಾಗವಹಿಸಿದ್ದ ಮಲ್ಲು ಶೇಷಗಿರಿ, ಪರಶುರಾಮ್ ದೊಡ್ಡಮನಿ, ಸೋಮನಾಥ ದೊಡ್ಡಮನಿ, ವಿಜಯ್ ಮಾದರ ಜಂಬಿಗಿ, ಪರಶುರಾಮ್ ಮಾದರ ಕವಡಿಮಟ್ಟಿ, ಶಿವಾನಂದ್ ನಂದಿಹಾಳ, ಶಶಿಧವಳಗಿ ಮುಂತಾದವರು ಭಾಗವಹಿಸಿದ್ದರು

### ಭೂತನಾಳ-ಬಾಬಾನಗರ ಬಳಿ ಸ್ಥಳ ಗುರುತಿಸಲು ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಸೂಚನೆ

# 200 ಹೆಕ್ಟರ್ ಪ್ರದೇಶದಲ್ಲಿ ಅರಣ್ಯ ಬೆಳೆಸುವ ಯೋಜನೆ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ(ಓಖಂಖ)ದವರು ರಾಜ್ಯದ ಅರಣ್ಯ ಪ್ರದೇಶದಲ್ಲಿ ಹೆದ್ದಾರಿ ಅಭಿವೃದ್ಧಿ ಕೈಗೊಂಡಿದ್ದು, ಈ ಹೆದ್ದಾರಿಯಿಂದ ಕಡಿಮೆಯಾಗುವ ಅರಣ್ಯ ಜಮೀನಿಗೆ ಬದಲಾಗಿ ವಿಜಯಪುರ ಜಿಲ್ಲೆಯಲ್ಲಿ ಕಂದಾಯ ಇಲಾಖೆ ಜಮೀನನ್ನು ಅರಣ್ಯ ಇಲಾಖೆಗೆ ಹಸ್ತಾಂತರಿಸಲು ಉದ್ದೇಶಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಭೂತನಾಳ ಮತ್ತು ಬಾಬಾನಗರ ಬಳಿ 200 ಹೆಕ್ಟರ್ ಪ್ರದೇಶ

# ಫೆ.29ರಿಂದ ಸರ್ಕಾರಿ ನೌಕರರ ಕ್ರೀಡಾಕೂಟ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಜಿಲ್ಲಾ ಘಟಕ ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಫೆಬ್ರವರಿ.29, ಮಾರ್ಚ್ 1 ಹಾಗೂ 2ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ವಿಜಯಪುರ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಫೆ.29ರ ಬೆಳಗ್ಗೆ 10 ಗಂಟೆಗೆ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ. ಪಾಟೀಲ ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಜಯಪುರ ನಗರ ಶಾಸಕರಾದ ಬಸನಗೌಡ ಆರ್. ಪಾಟೀಲ (ಯತ್ನಾಳ) ವಹಿಸಲಿದ್ದಾರೆ. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ನವದೆಹಲಿಯಲ್ಲಿನ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ಹಾಗೂ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರಾದ ಶಾಸಕ ಅಪ್ಪಾಜಿ ಸಿ.ಎಸ್ ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ಯಶವಂತರಾಯಗೌಡ ಪಾಟೀಲ, ಹಣಮಂತ. ಆರ್. ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್. ಪೂಜಾರ, ವಿಠ್ಠಲ ಕಟಕಧೋಂಡ, ಭೀಮನಗೌಡ (ರಾಜುಗೌಡ) ಬಸನಗೌಡ ಪಾಟೀಲ,ಅಶೋಕ ಮನಗೂಳಿ, ವಿಜಯಪುರ ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಮಹೇಜಬಿನ ಅಬ್ದುಲರಜಾಕ ಹೊರ್ತಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

# ಮಕ್ಕಳಲ್ಲಿ ಶಿಸ್ತು, ಸಂಶೋಧನಾ ಪ್ರಜ್ಞೆ ಬೆಳೆಸಿ :ಕೆಂಭೋಗಿ

ಉದಯರಶ್ಮಿ ನ್ಯೂಸ್

ಇಂಡಿ: ಪ್ರತಿ ಪಾಲಕರು ಅರ್ಥ ಮಾಡಿಕೊಳ್ಳಬೇಕು ಪ್ರಪಂಚದಲ್ಲಿರುವ ಪ್ರತಿ ಮಗು ಕೂಡಾ ಒಂದು ಬಲವಾದ ಪ್ರತಿಭೆ ಹೊತ್ತು ಬಂದಿರುತ್ತದೆ ಎಂದು ಸಾಹಿತಿ, ಶಿಕ್ಷಕ ದಶರಥ ಕೋರಿ ಹೇಳಿದರು.

ಪಟ್ಟಣದ ಪ್ರತಿಷ್ಠಿತ ಎಸ್ ಎಸ್ ಪ್ಯಾರಾ ಮೆಡಿಕಲ್ ಕಾಲೇಜು ಹಾಗೂ ಎಕ್ಸಲೆಂಟ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ನಿಮತ್ಯವಾಗಿ ಹಮ್ಮಿಕೊಂಡಿರುವ ಪ್ರಯುಕ್ತ ಬಹುಮಾನ ವಿತರಣಾ ಸಂಭ್ರಮದಲ್ಲಿ ಪ್ರೇರಣಾದಾಯಕವಾಗಿ ಮಾತನಾಡಿದರು.

ಜಗತ್ತು ಕಂಡ ಅತ್ಯದ್ಭುತ ವಿಜ್ಞಾನಿ ಥಾಮಸ್ ಆಲ್ವ ಎಡಿಸನ್ ಬಾಲ್ಯದಲ್ಲಿ ಕಲಿಯುವ ಸಂದರ್ಭದಲ್ಲಿ ಶಾಲಾ ಕಲಿಕೆಯಲ್ಲಿ ತುಂಬಾ ಹಿಂದುಳಿದ ವಿದ್ಯಾರ್ಥಿಯಾಗಿದ್ದನು.

ಆತನ ಶಿಕ್ಷಕರು ಆತನನ್ನು ಕಂಡು ಆತನ ತಾಯಿಗೆ ಪತ್ರ ಬರೆದು ನಿಮ್ಮ ಮಗನಿಗೆ ಶಾಲೆ ಬಿಡಿಸುವುದು ಒಳಿತು ಎಂದರು.

ಶಾಲೆಯಲ್ಲಿ ಸಂಪೂರ್ಣವಾಗಿ ನಿರ್ಲಕ್ಷಿತವಾಗಿರುವ ಮಗುವನ್ನು ಕಂಡು ತಾಯಿ ತನ್ನ ಮಗನ ಕುರಿತು ಶಿಕ್ಷಕರು ನೀಡಿದ ಕಾಗದ ಬಗ್ಗೆ ಏನನ್ನೂ ಹೇಳದೆ, ಅದನ್ನು ಮುಚ್ಚಿಟ್ಟಳು. ನಂತರ ಮಗನಿಗೆ ನೀನು ಶಾಲೆಯಲ್ಲಿ ತುಂಬಾ ಜಾಣನಾಗಿರುವೆ.! ನಿನಗೆ ಶಾಲೆಯ ಅಗತ್ಯವಿಲ್ಲವೆಂದು ನಿಮ್ಮ ಶಿಕ್ಷಕರು ಹೇಳಿದ್ದಾರೆ.! ಎಂದು ಹೇಳಿ ಮನೆಯಲ್ಲಿ ಆತನಿಗೆ ಬೋಧನೆ ನೀಡಿ ಆತನನ್ನು ವಿಜ್ಞಾನದ ನೂರಾರು ಆವಿಷ್ಕಾರಗಳನ್ನು ಕಂಡು ಹಿಡಿಯಲು ಪ್ರೇರಣೆಯಾದಳು. ಹಾಗಾಗಿ ಪ್ರತಿ ಪಾಲಕರು ಅರ್ಥ ಮಾಡಿಕೊಳ್ಳಬೇಕು ಪ್ರಂಪಚದಲ್ಲಿರುವ ಪ್ರತಿ ಮಗು ಕೂಡಾ ಒಂದು ಬಲವಾದ ಪ್ರತಿಭೆ ಹೊತ್ತು ಬಂದಿರುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಸಂತೋಷ ಕೆಂಭೋಗಿ ಮಾತನಾಡಿ, ಮಕ್ಕಳಲ್ಲಿ ಶಿಸ್ತು, ಸಮಯ ಪ್ರಜ್ಞೆ, ಸಂಶೋಧನಾ ಪ್ರಜ್ಞೆಯನ್ನು ಬೆಳೆಸಬೇಕು ಎಂದರು.

ಈ ಸಂದರ್ಭದಲ್ಲಿ ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಸೌಮ್ಯ ರೂಗಿ ಪ್ರಾಧ್ಯಾಪಕರಾದ ಮಹಾಂತೇಶ ಪಾಟೀಲ ಶಿಕ್ಷಕರಾದ ಶ್ರೀಶೈಲ್ ಹೂಗಾರ ಅರುಣ ವಠಾರ ಶ್ವೇತಾ ದೋತ್ರೆ, ಶೋಭಾ ಸಾರವಾಡ ಹಾಜರಿದ್ದರು.

# ಕಾತ್ರಾಳದಲ್ಲಿ ಭಕ್ತ ಕನಕದಾಸ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನೂತನ ಪುತ್ಥಳಿಯ ಉದ್ಘಾಟನೆ

# ಜನಮಾನಸದಲ್ಲಿ ಶಾಶ್ವತ ನೆಲೆಸಿದ ಕನಕದಾಸರು :ಸಚಿವ ಪಾಟೀಲ

ಉದಯರಶ್ಮಿ ನ್ಯೂಸ್

ವಿಜಯಪುರ: ಕನಕದಾಸರು ಭಕ್ತಿಯ ಮೂಲಕ ಮತ್ತು ಸಂಗೊಳ್ಳಿ ರಾಯಣ್ಣ ಸ್ವಾತಂತ್ರ್ಯ ಹೋರಾಟದ ಮೂಲಕ ಜನಮಾನಸದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಬಬಲೇಶ್ವರ ತಾಲೂಕಿನ ಕಾತ್ರಾಳ ಗ್ರಾಮದಲ್ಲಿ ಶ್ರೀ ಭಕ್ತ ಕನಕದಾಸ ಮತ್ತು ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನೂತನ ಪುತ್ಥಳಿಯ ಉದ್ಘಾಟನೆ ನೆರವೇರಿಸಿದ ನಂತರ ಧರ್ಮಸಭೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಬಸವಣ್ಣ, ಕನಕದಾಸ, ರಾಯಣ್ಣ, ಅಂಬೇಡ್ಕರ ಮಹಾಪುರುಷರು ಮತ್ತು ರಾಷ್ಟ್ರ ನಾಯಕರು. ಒಂದು ಸಮಾಜಕ್ಕೆ ಸೀಮಿತರಾದವರಲ್ಲ. ಹಾಲುಮತ ಅಪಾರ ದೈವಭಕ್ತಿ ಹೊಂದಿರುವ ಸಮಾಜವಾಗಿದೆ. ಭಕ್ತ ಕನಕದಾಸರು ಭಕ್ತಿಯಿಂದ ಕೃಷ್ಣನನ್ನು ಒಲಿಸಿಕೊಂಡಿದ್ದರು. ಸಂಗೊಳ್ಳಿ ರಾಯಣ್ಣ ಕಿತ್ತೂರು ಸಂಸ್ಥಾನದ ಉಳಿವಿಗಾಗಿ ರಾಣಿ ಚೆನ್ನಮ್ಮರ ಜೊತೆ ಬ್ರಿಟೀಷರ ವಿರುದ್ಧ ಹೋರಾಡಿ ಹುತಾತ್ಮರಾಗಿದ್ದಾರೆ. ಅವರ ತ್ಯಾಗ ಮತ್ತು ಆದರ್ಶಮಯ ಜೀವನ ನಮಗೆಲ್ಲರಿಗೂ ಮಾದರಿಯಾಗಿದೆ ಎಂದು ಅವರು ಹೇಳಿದರು.

ಕಾತ್ರಾಳ ಗ್ರಾಮಸ್ಥರು ದುಡಿಮೆಗೆ ಸಶಕ್ತರು, ಶ್ರಮಜೀವಿಗಳು. ನೀರಾವರಿಯಿಂದಾಗಿ ಈ ಗ್ರಾಮದ ಜನ ಕೃಷಿ ಚಟುವಟಿಕೆಗಳಲ್ಲಿ ವ್ಯಸ್ಥರಾಗಿದ್ದಾರೆ. 2013 ರಿಂದ 18ರ ಅವಧಿಯಲ್ಲಿ ಸಿಎಂ ಎಸ್. ಸಿದ್ಧರಾಮಯ್ಯ ಅವಧಿಯಲ್ಲಿ ಜಲಸಂಪನ್ಮೂಲ ಸಚಿವನಾಗಿ ಕೈಗೊಂಡಿರುವ ನೀರಾವರಿ ಯೋಜನೆಗಳಿಂದಾಗಿ ಈ ಭಾಗದಲ್ಲಿ ರೈತರು ಆರ್ಥಿಕವಾಗಿ ಸಶಕ್ತರಾಗುತ್ತಿರುವುದು ಸಂತಸ ತಂದಿದೆ. ಈಗ ಕಾತ್ರಾಳ ಗ್ರಾಮದ ಅಗಸಿಯಲ್ಲಿ ಕನಕದಾಸ ಮತ್ತು ಸಂಗೊಳ್ಳಿ ರಾಯಣ್ಣರ ಪ್ರತಿಮೆ ಸ್ಥಾಪನೆಯಿಂದಾಗಿ ಗ್ರಾಮಕ್ಕೆ ಲಕ್ಷಣ ಬಂದಿದೆ. ಈ ಭಾಗದಲ್ಲಿ ಬಾಕಿ ಇರುವ 15ನೇ ವಿತರಣೆ ಕಾಲುವೆ ಮತ್ತು 5ಎ ಮತ್ತು 5ಬಿ ನೀರಾವರಿ ಕಾಮಗಾರಿಗಳಿಗೆ ಕೆಬಿಜೆಎ□□□ಲ್ ಆಡಳಿತಾತ್ಮಕ ಅನುಮೋದನೆ ದೊರಕಿದ್ದು, ಒಟ್ಟು ರೂ. 319 ಕೋ. ವೆಚ್ಚದ ಕಾಮಗಾರಿಗಳಿಗೆ ಶೀಘ್ರದಲ್ಲಿ ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗಲಿದೆ. ಅಲ್ಲದೇ, ಕಾತ್ರಾಳ ಕೆರೆ ತುಂಬಿಸಲೂ ಕೂಡ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಈಗ ಕೈಗಾರಿಕೆ ಸಚಿವನಾಗಿ ವಿಜಯಪುರ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಕಾರ್ಯೋನ್ಮುಖನಾಗಿದ್ದು, ಈಗಾಗಲೇ ಎರಡು ಕಂಪನಿಗಳು ಉದ್ಯಮ ಸ್ಥಾಪನೆಗೆ ಮುಂದಾಗಿವೆ. ಜೆ.ಎಸ್.ಡಬ್ಲ್ಯೂ ಜೊತೆಗೂ ಈ ನಿಟ್ಟಿನಲ್ಲಿ ಮಾತುಕತೆ ಪ್ರಗತಿಯಲ್ಲಿದೆ ಎಂದು ಎಂ. ಬಿ. ಪಾಟೀಲ ತಿಳಿಸಿದರು.

ಸರೂರ ಅಗತೀರ್ಥ ಹಾಲುಮತ ಗುರುಪೀಠದ ಶ್ರೀ ರೇವಣಸಿದ್ಧೇಶ್ವರ ಶಾಂತಮಯ ಮಹಾಸ್ವಾಮಿಗಳು ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರು ಬಿಸಿಲ ನಾಡಿನಲ್ಲಿ ಭೂಮಿತಾಯಿಗೆ ಅಗತ್ಯವಾಗಿರುವ ನೀರನ್ನು ನೀಡುವ ಮೂಲಕ ಪ್ರಕೃತಿಯಲ್ಲಿ ಹಸಿರು ಸಮೃದ್ಧಿಯಾಗಿರುವಂತೆ ಮಾಡಿ ಜನರ ನೆಮ್ಮದಿಯಿಂದ ಉಸಿರಾಡುವಂತೆ ಮಾಡಿದ್ದಾರೆ. ಭೂಮಿತಾಯಿ ನೀರಾವರಿ ಯೋಜನೆಗಳ ಮೂಲಕ ಈ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಕಾರಣರಾಗಿದ್ದಾರೆ. ಇದರಿಂದಾಗಿ ಈಗ ಬರಡು ನೆಲದಲ್ಲಿ ಲಕ್ಷಾಂತರ ಟನ್ ಕಬ್ಬು ಬೆಳೆಯಲಾಗುತ್ತದೆ. ಈ ಮೂಲಕ ಸಚಿವರು ನಿಜವಾದ ಜನಸೇವಕರಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಸಂಗೊಳ್ಳಿ ರಾಯಣ್ಣ ಮನುಕುಲದ ಒಳಿತಿಗಾಗಿ ಹೋರಾಡಿದ್ದಾರೆ. ನಾಡು ಮತ್ತು ದೇಶಕ್ಕಾಗಿ ಜೀವತ್ಯಾಗ ಮಾಡಿ ಕ್ರಾಂತಿ ಮಾಡಿದ್ದಾರೆ. ಬಸವಣ್ಣನವರು ಅನುಭವ ಮಂಟಪದ ಮೂಲಕ ಸಮಾನತೆಗಾಗಿ ಶ್ರಮಿಸಿದ್ದಾರೆ. ಅವರ ನಂತರ ಕನಕದಾಸರು ಸಮಾನತೆಯ ಹೋರಾಟ ಮುಂದುವರೆಸಿದ್ದರು. ಕನಕದಾಸರ ಕಾಲದಲ್ಲಿ ಕನಕರನ್ನು ಕೆಣಕಬೇಡಿ. ಕೆಣಕಿ ತಿಣುಕಬೇಡಿ ಎಂಬುದು ಅಂದಿನ ಕಾಲದಲ್ಲಿ ಜನಜನಿತವಾಗಿತ್ತು. ಇಂದಿನ ಯುವಕರು ಮೂಢ ನಂಬಿಕೆಗಳಿಂದ ಹೊರ ಬರಬೇಕು. ದುಶ್ಚಟಗಳಿಂದ ದೂರವಿರಬೇಕು. ಆಚರಣೆ ಹೆಸರಿನಲ್ಲಿ ದುಂದುವೆಚ್ಚ ಮಾಡಿ ಆರ್ಥಿಕವಾಗಿ ತೊಂದರೆಗೆ ಸಿಲುಕುವ ಬದಲು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸುಶಿಕ್ಷಿತರನ್ನಾಗಿ ಮಾಡಿ ಎಂದು ಸಮಾಜದ ಜನತೆಗೆ ಕಿವಿಮಾತು ಹೇಳಿದರು.

ಮಹಾರಾಷ್ಟ್ರದ ಸುಕ್ಷೇತ್ರ ಹುಲಜಂತಿ ಪಟ್ಟದ ಪೂಜ್ಯರಾದ ಶ್ರೀ ಮಾಳಿಂಗರಾಯ ಮಹಾರಾಯರು ಮಾತನಾಡಿ, ಪರೋಪಕಾರಕ್ಕಾಗಿ ಬದುಕಿದವರು ದೇವರಾಗುತ್ತಾರೆ. ಕನಕದಾಸರು, ರಾಯಣ್ಣರು ತಮ್ಮ ಕಾಯಕಗಳ ಮೂಲಕ ಅಜರಾಮರರಾಗಿದ್ದಾರೆ. ಮಾನವ ಕುಲದ ಹಿತಕ್ಕಾಗಿ ಬದುಕಿ ಸೂರ್ಯ ಚಂದ್ರರಿರುವ ವರೆಗೆ ಅವರು ಅಜರಾಮರರಾಗಿರುತ್ತಾರೆ. ಬುದ್ಧ, ಬಸವ, ಅಂಬೇಡ್ಕರ್, ಕನಕದಾಸ, ರಾಯಣ್ಣ ನಮಗೆ ಮಾದರಿಯಾಗಬೇಕು. ಎಂ. ಬಿ. ಪಾಟೀಲರು ಮಡ್ಡಿಭೂಮಿಗೆ ನೀರುಕೊಟ್ಟು ರೈತರು ಸಮಾಜಕ್ಕೆ ಅನುದಾನ ನೀಡುವಂತೆ ಮಾಡಿದ್ದಾರೆ. ಅವರ ಕಾರ್ಯಗಳೂ ಜನಮಾನಸದಲ್ಲಿ ಶಾಶ್ವತವಾಗಿರಲಿವೆ ಎಂದು ಹೇಳಿದರು.

ಖ್ಯಾತ ವಾಗ್ಮಿ ಮತ್ತು ಯುವ ಮುಖಂಡ ಮೋಹನ ಮೇಟಿ ಮಾತನಾಡಿ, ಕಾಯಕ ವೃತ್ತಿಗಳ ಆದಾರದ ಮೇಲೆ ಜಾತಿಗಳಾಗಿವೆ. 12ನೇ ಶತಮಾನದಲ್ಲಿ ಬಸವಣ್ಣ ಸಮಾನತೆಗಾಗಿ ಹೋರಾಡಿದರೆ, ಅವರ ನಂತರ ಭಕ್ತ ಕನಕದಾಸರು ಸಮಾನತೆ ಮತ್ತು ಸಾಮಾಜಿಕ ಮೌಢ್ಯಗಳ ವಿರುದ್ಧ ಹೋರಾಡಿದರು. ಇವರ ಬಳಿಕ ಸಂಗೊಳ್ಳಿ ರಾಯಣ್ಣ ದೇಶಕ್ಕಾಗಿ ಹೋರಾಡಿದ್ದಾರೆ. ಇಂಥ ಮಹಾಪುರುಷರು ಯುವಕರಿಗೆ ಪ್ರೇರಣೆಯಾಗಬೇಕು. ಹಾಲುಮತ ಧರ್ಮ ಎಲ್ಲದಕ್ಕೂ ಮೂಲ ಧರ್ವವಾಗಿದೆ. ಸಚಿವ ಎಂ. ಬಿ. ಪಾಟೀಲರು ಅಕ್ಷರ, ಅನ್ನ, ನೀರು ಕೊಟ್ಟ ಭಗೀರಥರಾಗಿದ್ದಾರೆ. ಜನರ ಬದುಕು ಕಟ್ಟಿಕೊಳ್ಳಲು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸುಕ್ಷೇತ್ರ ಗೊಳಸಾರದ ಶ್ರೀ ಅಭಿನವ ಪುಂಡಲಿಂಗೇಶ್ವರ ಮಹಾರಾಜರು, ಹಂದಿಗುಂದ ಶ್ರೀ ಹಾಲಸಿದ್ಧನಾಥನ ಮಠದ ಶ್ರೀ ಶ್ರೀಮಂತ ಶಿವಯೋಗಿ ಅಜ್ಜನವರು, ಸುಕ್ಷೇತ್ರ ಬಳಗಾನೂರಿನ ಶ್ರೀ ಸೋಮರಾಯ ಮುತ್ಯಾ, ಕಾತ್ರಾಳ ಗದ್ದುಗೆ ಪೂಜಾರಿ ಶ್ರೀ ಮಲಕಾರಿಸಿದ್ಧ ಸೋ. ಒಡೆಯರ, ಮಲ್ಲಯ್ಯ ಕಾ. ಮಠ, ಕಾತ್ರಾಳ ಶ್ರೀ ಕನಕದಾಸ ಸಂಘದ ಅಧ್ಯಕ್ಷ ವಿಠ್ಠಲ ಯಂ. ಪಡಸಲಗಿ, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ರಾಜು ಕಂಬಾಗಿ, ಸಾಬು ಮಾಶ್ಯಾಳ, ಮಲ್ಲಿಕಾರ್ಜುನ ಪರಸಣ್ಣವರ, ಮಲ್ಲು ಬಿದರಿ, ವಿಠ್ಠಲ ಪಡಸಲಗಿ, ಕಲ್ಲಪ್ಪಗೌಡ ನ್ಯಾಮಗೌಡ, ವಿಠ್ಠಲ ಯಂಕಪ್ಪ ಪಡಸಲಗಿ, ಎಂ. ಡಿ. ಪಡಸಲಗಿ, ಬಾಳೇಶ ಸೋ. ಪಡಸಲಗಿ, ಮಾಸಿದ್ದಸಾ. ಪಡಸಲಗಿ, ತುಕಾರಾಮ ಭೀ. ಪಡಸಲಗಿ, ಅಮ್ಮೋಗಿ ಸಿ. ಗಲಗಲಿ, ಲಕ್ಷ್ಮಣ ಜಿರಲಿ ಮುಂತಾದರುವ ಉಪಸ್ಥಿತರಿದ್ದರು.

ಇದಕ್ಕೂ ಮುಂಚೆ ಕಾರ್ಯಕ್ರಮದ ಅಂಗವಾಗಿ ಶ್ರೀ ಭಕ್ತ ಕನಕದಾಸ ಮತ್ತು ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಭಾವಚಿತ್ರಗಳ ಮೆರವಣಿಗೆ ಮತ್ತು ಕುಂಭಮೇಳ ನಡೆಯಿತು.

# ಮಕ್ಕಳಿಗೆ ಪಠ್ಯದ ಜೊತೆ ಸಂಸ್ಕಾರ ಅಗತ್ಯ :ಕಿಣಗಿ

ಉದಯರಶ್ಮಿ ನ್ಯೂಸ್

ಸಿಂದಗಿ: ಲಿಟಲ್‌ವಿಂಗ್ಸ್ ವಿದ್ಯಾ ಸಂಸ್ಥೆಯು ಪಠ್ಯದ ಜೊತೆ ಸಂಸ್ಕಾರಯುತ ಶಿಕ್ಷಣ ಕೊಡುತ್ತಿರುವುದು ಶ್ಲಾಘನೀಯ ಎಂದು ಉಪನ್ಯಾಸಕ ಸಿದ್ದಲಿಂಗ ಕಿಣಗಿ ಹೇಳಿದರು.

ನಗರದ ಮಂಗಲ್ಯ ಭವನದಲ್ಲಿ ನಡೆದ ಲಿಟಲ್ ವಿಂಗ್ಸ್ ಶಾಲೆಯ ಪ್ರಥಮ ವಾರ್ಷಿಕೋತ್ಸವದಲ್ಲಿ ಅತಿಥಿಯಾಗಿ ಮಾತನಾಡಿದ ಅವರು, ಓದುವ ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಜೊತೆ ಇರುವ ಸಂಸ್ಕಾರದ ಭಾವನೆಗೆ ಶ್ಲಾಘನೆಯನ್ನು ವ್ಯಕ್ತಪಡಿಸಿದರು. ಈ ಶಾಲೆಯ ಚಟುವಟಿಕೆ ಆದರಿತ ಶಿಕ್ಷಣ ಕಲಿಯುತ್ತಿರುವ ವಿದ್ಯಾರ್ಥಿಗಳು ಪುಣ್ಯವಂತರು ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕಸಾಪ ನಿಕಟ ಪೂರ್ವ ಅಧ್ಯಕ್ಷ ರಾಜಶೇಖರ ಕೂಚಬಾಳ, ವಿದ್ಯಾರ್ಥಿಗಳಿಗೆ ಪೋಷಕರು ಒತ್ತಡವನ್ನು ಹಾಕಬಾರದು. ಅವರಿಗೆ ಅವರ ಜೀವನದಲ್ಲಿ ಓದಬೇಕಾದ ಆಸಕ್ತಿಯ ವಿಷಯವನ್ನು ಕಲಿಯಲು ಬಿಡಬೇಕೆಂದು ಹೇಳಿದರು. ವಿದ್ಯಾರ್ಥಿಗಳಿಗೆ ಮೌಲ್ಯಾಧಾರಿತ ಶಿಕ್ಷಣವನ್ನು ನೀಡಿದಾಗ ಮಾತ್ರ ಇಂತಹ ಒಳ್ಳೆಯ ಸಂಸ್ಕಾರಯುತ ವಿದ್ಯಾರ್ಥಿಗಳಾಗಿ ನಿರ್ಮಾಣವಾಗಲು ಸಾಧ್ಯವಿದೆ ಎಂದು ಹೇಳಿದರು.

ಸಾನಿಧ್ಯ ವಹಿಸಿ ಮಾತನಾಡಿದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಪವಿತ್ರಾಜೀ ಈ ಸಂಸ್ಥೆಯು ಭಾರತೀಯ ಸಂಸ್ಕೃತಿಯನ್ನು ಮಕ್ಕಳಲ್ಲಿ ಬೆಳೆಸುವ ಕೆಲಸ ಮಾಡುತ್ತಿದೆ. ಬೆಳಗಿನ ಪ್ರಾರ್ಥನೆಯ ಮೂಲಕ ಶಿಸ್ತು ಅಳವಡಿಸುವಂತೆ ಮಾಡಿದೆ. ಈಗಾಗಲೇ ಪಠ್ಯದ ಜೊತೆ ಹೆಚ್ಚುವರಿ ಚಟುವಟಿಕೆ ವಿಷಯಗಳ ಭೋದನೆ, ಶಕ್ತಿ ಸನಾತನ–ಸಂಪದ, ಮೌಲ್ಯಾಧಾರಿತ ಶಿಕ್ಷಣದ ತರಗತಿಯನ್ನು ಅಳವಡಿಸಿರುವುದು ಮಕ್ಕಳ ಬೆಳವಣಿಗೆಗೆ ಪೂರಕ ವಾತವರಣವನ್ನು ನಿರ್ಮಿಸುವಲ್ಲಿ ಯಶಸ್ವಿಯಾಗಿದೆ. ಈ ವಿದ್ಯಾರ್ಥಿಗಳನ್ನು ಬೆಳೆಸುವಲ್ಲಿ ಶಿಕ್ಷಕರು ತುಂಬಾ ಶ್ರಮವಹಿಸಿರುವುದು ಈ ಶಾಲೆ ಪೂರಕವಾಗಿದೆ ಎಂದರು

ಗಣವರ್ತಕ ಪ್ರಶಾಂತಗೌಡ ಪಾಟೀಲ, ಪಾಲಕ ಪ್ರತಿನಿಧಿ ಸುರೇಶ ಯರನಾಳ ನಿವೃತ್ತ ಉಪನ್ಯಾಸಕ ಸಿದ್ದಣ್ಣ ಚೌದರಿ, ಶಿವಶಂಕರ ಚೌದರಿ, ಪ್ರಭುಲಿಂಗ ಲೋಣಿ ವೇದಿಕೆ ಮೇಲಿದ್ದರು.

ಶಿಕ್ಷಕರಾದ ಕುದರತಲಿ ಬೂಸನೂರ, ಸಿದ್ದಪ್ಪ ಮಾರಿಯಾಳ, ಜೆ ಬಿ ಪಾಟೀಲ, ನಾಗರಾಜ ಪತ್ತಾರ, ಎಚ್ ಎನ್ ಚೌದರಿ, ಬಸವರಾಜ ಹಡಪದ, ಬಸವಂತರಾಯ ಹೂಗಾರ, ರಾಯಪ್ಪ ಇವಣಗಿ, ಮಲ್ಲಮ್ಮ ಅಡಕಿ ಇವರಿಗೆ ಪ್ರಸಕ್ತ ಸಾಲಿನ ಮಂದಾರ ಸಿರಿ ಆದರ್ಶ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ರಾಷ್ಟ್ರಮಟ್ಟದ ಖೋ ಕ್ರೀಡಾಪಟು ಪ್ರಜ್ವಲ ತಳವಾರ ರಾಜ್ಯಮಟ್ಟದ ಪ್ರತಿಭಾ ಕಾರಂಜಿ ವಿಜೇತೆ ಕಾವ್ಯಾ ನಾಯ್ಕ ಅಲ್ಲದೇ ನಿವೃತ್ತ ಶಿಕ್ಷಕರಾದ ಕಲ್ಯಾಣಿ ಕಟಗಿಗಾಣ ಜಿಓಸಿಸಿ ಬ್ಯಾಂಕನ ಲಕ್ಷ್ಮಿ ರೆಬಿನಾಳ,ವೈದ್ಯ ವಿದ್ಯಾ ಬಡಿಗೇರ , ಎಂ ಬಿ ಅಲ್ದಿ,

# ಮಕ್ಕಳನ್ನು ಸ್ವಾವಲಂಬಿಗಳನ್ನಾಗಿಸಿ :ಸಾಹಿತಿ ಗುಂಡೇರಾವ್

ಉದಯರಶ್ಮಿ ನ್ಯೂಸ್

ಯಡ್ರಾಮಿ: ಮಕ್ಕಳನ್ನು ಅಂಕಪಟ್ಟಿಗಳ ತಯಾರಿಕೆಯ ಯಂತ್ರವನ್ನಾಗಿಸದೇ ಅವರಲ್ಲಿನ ನಿಜವಾದ ಪ್ರತಿಭೆ ಗುರುತಿಸಿ ಅವರನ್ನು ಸ್ವಾವಲಂಬಿಗಳನ್ನಾಗಿಸಿ ಜೀವನಕ್ಕೆ ಅಣಿಗೊಳಿಸುವಂತ ಶಿಕ್ಷಣ ನಮ್ಮದಾಗಬೇಕು ಎಂದು ಸಾಹಿತಿ, ಸಂಶೋಧಕ ಮುಡಬಿ ಗುಂಡೇರಾವ್ ಸೇಡಂ ಅವರು ಹೇಳಿದರು.

ಪಟ್ಟಣದ ಜ್ಞಾನೋದಯ ಶಿಕ್ಷಣ ಸಂಸ್ಥೆಯ ಜ್ಞಾನಭಾರತಿ ಪ್ರಾಥಮಿಕ, ಪ್ರೌಢ ಕನ್ನಡ ಮತ್ತು ಆಂಗ್ಲ ಮಾಧ್ಯಮ ಶಾಲೆಯಯಲ್ಲಿ ಶುಕ್ರವಾರ ಆಯೋಜಿಸಿದ್ದ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಲ್ಲಿ ಟಾಟಾ, ಬಾಯ್ ಬಾಯ್, ಅಂಕಲ್, ಅಂಟಿ ಸಂಸ್ಕೃತಿಯಿಂದ ದೂರವಾಗಿರಿಸಿ ಅಪ್ಪಟ ನಮ್ಮ ದೇಶಿ ಸಂಸ್ಕೃತಿಯ ಉದಾತ್ತ ಮೌಲ್ಯಗಳನ್ನು ಬಿತ್ತಬೇಕಾಗಿದೆ. ಡಾ। ಬಾಬಾಸಾಹೇಬ ಅಂಬೇಡ್ಕರ್, ಅಬ್ದುಲ್ ಕಲಾಂ, ಸಂಗೊಳ್ಳಿ ರಾಯಣನಂಥ ಮಹಾನ್ ಪುರುಷರ ಜೀವನ ಚರಿತ್ರೆ ನಮ್ಮ ಮಕ್ಕಳಿಗೆ ಆದರ್ಶವಾಗಬೇಕಿದೆ. ಈ ನಿಟ್ಟಿನಲ್ಲಿ ಪಾಲಕ–ಪೋಷಕರು ತಮ್ಮ ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸಿ ರಾಷ್ಟ್ರ ಪ್ರೇಮ, ನಾಡ ಅಭಿಮಾನ ಬೆಳೆಸುವಂತೆ ಸಜ್ಜುಗೊಳಿಸಬೇಕೆಂದರು.

ನಂತರ ಯುವ ಸಾಹಿತಿ ಡಾ। ಸಂತೋಷ ನವಲಗುಂದ ಮಾತನಾಡಿ, ಮಕ್ಕಳಿಗೆ ಹೆಚ್ಚು ಅಂಕಗಳನ್ನು ಪಡೆಯುವಂತೆ ಪಾಲಕರು ಒತ್ತಡ ಹಾಕದೇ ಅವರಿಗೆ ಸ್ವತಂತ್ರವಾಗಿ ಓದು–ಬರೆಯಲು ಅವಕಾಶ ನೀಡಬೇಕು. ಹಾಗೆಯೇ, ಮಕ್ಕಳಿಗೆ ತಮ್ಮ ಮುಂದಿನ ಜೀವನದಲ್ಲಿ ಎಂಥದ್ದೇ ಕಷ್ಟಗಳು ಎದುರಾದರೂ ಅವುಗಳನ್ನು ಎದುರಿಸಿ ಮುನ್ನಡೆಯುವಂತಹ ಜೀವನ ಕೌಶಲ್ಯವನ್ನು ಶಿಕ್ಷಕರು ಹಾಗೂ ಪಾಲಕರು ಕಲಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ ಯಡ್ರಾಮಿ ವಿರಕ್ತಮಠದ ಸಿದ್ಧಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಮುಖಂಡರಾದ ಚಂದ್ರಶೇಖರ ಪುರಾಣಿಕ, ಮಹಾಲಿಂಗಪ್ಪಗೌಡ ಬಂಡೆಪ್ಪಗೌಡ್ರ, ಸಿದ್ಧನಗೌಡ ಮಾಲೀಪಾಟೀಲ, ತಾಲೂಕು ಕಸಾಪ ಅಧ್ಯಕ್ಷ ನಾಗಪ್ಪ ಸಜ್ಜನ, ಬಿ.ಬಿ.ವಾರದ, ಆರ್,ಜಿ. ಪುರಾಣಿಕ, ಅಬ್ದುಲ್ ರಜಾಕ್ ಮನಿಯಾರ, ಬಾಬಾಫರೀದ ಮಳ್ಳಿಕರ್, ನಾಗಣ್ಣ ಹಾಗರಗುಂಡಗಿ, ಬಸನಗೌಡ ಖಾನಗೌಡರ್, ಗುರುಬಸಪ್ಪ ಚಾಂದಕವಟೆ, ಮಲ್ಲನಗೌಡ ಪಾಟೀಲ, ಅಜ್ಮೀರ್ ಪಟೇಲ, ಸಂಸ್ಥೆಯ ಮುಖ್ಯಸ್ಥ ಜಿ.ಎಸ್.ಬಿರಾದಾರ, ಬಸವರಾಜ ಕೋನಸಿರಸಗಿ, ಶಾಲೆಯ ಶಿಕ್ಷಕ ಸಿಬ್ಬಂದಿ, ಪಾಲಕರು ಹಾಗೂ ವಿದ್ಯಾರ್ಥಿಗಳಿದ್ದರು.

# ಕಾಂಗ್ರೆಸ್ ಕಾರ್ಯಾಲಯ ಲೋಕಾರ್ಪಣೆ

ಉದಯರಶ್ಮಿ ನ್ಯೂಸ್

ಚಿಮ್ಮಡ: ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಗ್ರಾಮ ಘಟಕದ ನೂತನ ಕಾರ್ಯಾಲಯ ಶ್ರೀಗಳಿಂದ ವಿಶೇಷ ಪೂಜೆ ನಡೆಸುವ ಮೂಲಕ ಲೋಕಾರ್ಪಣೆ ಗೊಳಿಸಲಾಯಿತು.

ಗ್ರಾಮದ ಬಸ್ ನಿಲ್ದಾಣದ ಪಕ್ಕದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಕಾಂಗ್ರೆಸ್ ಪಕ್ಷದ ಗ್ರಾಮ ಘಟಕದ ಕಾರ್ಯಾಲಯದ ಲೋಕಾರ್ಪಣೆಯನ್ನು ಸ್ಥಳಿಯ ವಿರಕ್ತಮಠದ ಶ್ರೀ ಪ್ರಭು ಮಹಾಸ್ವಾಮಿಗಳು ನೆರವೇರಿಸಿದರು.

ಗ್ರಾಮದ ಪ್ರಮುಖರಾದ ಅಣ್ಣಪ್ಪಗೌಡ ಪಾಟೀಲ, ಬಿ.ಎಸ್. ಪಾಟೀಲ, ಗುರಪ್ಪಾ ಬಳಗಾರ, ಕಾಂಗ್ರೆಸ್ ಗ್ರಾಮ ಘಟಕದ ಅಧ್ಯಕ್ಷ ಉಮೇಶ ಪೂಜಾರಿ, ಅಶೋಕ ಧಡೂತಿ, ದುಂಡಪ್ಪಾ ಪಾಟೀಲ, ಶಿವಪ್ಪಾ ನಾಗನೂರ, ಮಲ್ಲಿಕಾರ್ಜುನ ಬಳಗಾರ, ಗ್ರಾ.ಪಂ. ಸದಸ್ಯ ಬಾಳಪ್ಪ ಗಡೆಪ್ಪನವರ, ಶ್ರೀಶೈಲ ಮಠಪತಿ, ಪ್ರವೀಣ ಪೂಜಾರಿ, ರವಿ ದೊಡವಾಡ, ಇಮಾಮ ಯಾದವಾಡ, ಮಹಾಲಿಂಗ ಬಳಗಾರ, ಪಿರಸಾಬ ನದಾಫ, ಸಲೀಮ ಸರಕಾವಸ ಸೇರಿದಂತೆ ಹಲವಾರು ಜನ ಪ್ರಮುಖರು ಆಗಮಿಸಿದ್ದರು.

# ಅಶೋಕನ ಕಾಲದಲ್ಲಿ ಬರವಣಿಗೆ ಆರಂಭ :ಡಾ.ದೇವರಕೊಂಡಾರೆಡ್ಡಿ

ಉದಯರಶ್ಮಿ ನ್ಯೂಸ್

ವಿಜಯಪುರ: ಭಾರತೀಯ ಎಲ್ಲಾಭಾಷೆಗಳ ಮೂಲವು ಒಂದೇ, ಎಲ್ಲಾ ಭಾಷೆಗಳು ಒಂದಡೆಯಿಂದಲೇ ಜನ್ಯವಾಗಿ ಆಯಾಪ್ರದೇಶ, ವಾತಾವರಣ, ರಾಜಕೀಯ, ಧಾರ್ಮಿಕ ಅನುಗುಣವಾಗಿ ಮಾರ್ಪಾಡುಗಳಾಗಿವೆ ಎಂದು ಕರ್ನಾಟಕ ಇತಿಹಾಸ ಅಕಾಡೆಮಿ ಅಧ್ಯಕ್ಷರಾದ ದೇವರಕೊಂಡಾರೆಡ್ಡಿ ಹೇಳಿದರು.

ಶನಿವಾರ ನಗರ ಕುಮುದಬೇನ್ ದರ್ಬಾರ್ ವಿದ್ಯಾಲಯದಲ್ಲಿ ನಡೆದ, ಅಭಾಸಾಪ ಹಾಗೂ ಮಂಥನ–ಆಯೋಜನೆಯ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತಾಡಿದ ಅವರು, ಭಾರತದಲ್ಲಿ ಬರವಣಿಗೆ ಪ್ರಾರಂಭವಾಗಿದ್ದು ಅಶೋಕನ ಕಾಲದಲ್ಲಿ. ಅಲ್ಲಿಯವರಿಗೆ ಬರವಣಿಗೆಯೇ ನಮ್ಮ ದೇಶದಲ್ಲಿ ಇರಲಿಲ್ಲ. ಇತಿಹಾಸ ಅಧ್ಯಯನ ದೃಷ್ಟಿಕೋನದಿಂದ ಶಾಸನಗಳು ಅತ್ಯಂತ ಸ್ಪಷ್ಟ ಇತಿಹಾಸವನ್ನು ಹೇಳುತ್ತವೆ ಎಂದು ವಿವರಿಸಿದ ಅವರು, ಸರ್ಕಾರ ಅಥವಾ ಪ್ರಾಚ್ಯವಸ್ತು ಇಲಾಖೆಯನ್ನು ದೂರುವ ಬದಲು ನಿಮ್ಮನಿಮ್ಮ ಊರುಗಳಲ್ಲಿನ ಐತಿಹಾಸಿಕ ಪರಂಪರೆ ಸ್ಮಾರಕ, ದೇವಾಲಯಗಳನ್ನು ಸಂರಕ್ಷಣೆ ಮಾಡಿಕೊಳ್ಳುವಂತೆ ಕರೆ ಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಭಾಸಾಪ ಜಿಲ್ಲಾಧ್ಯಕ್ಷ ನಾರಾಯಣ ಬಾಬಾನಗರ ವಹಿಸಿದ್ದರು. ಕಾರ್ಯಕ್ರಮ ನಿರೂಪಣೆ ಸುಭಾಷ್ ಕನ್ನೂರು , ಸ್ವಾಗತ ಪರಿಚಯ ಶ್ರೀರಂಗ ಕುಲಕರ್ಣಿ, ವಂದನಾರ್ಪಣೆ ಮಾಡಿದರು. ಬಸವರಾಜ ದಂಡವತೆ, ಶ್ರೀಧರ "ವಂದೇ ಮಾತರಂ" ಗೀತೆ ಹಾಡಿದರು.

ಕಾರ್ಯಕ್ರಮದಲ್ಲಿ ಜಿ.ಆರ್ ಕುಲಕರ್ಣಿ, ಎ.ಎಲ್ ಆಲೂರು, ಉಮೇಶ ಕಾರಜೋಳ, ಪ್ರೊ. ಆನಂದ ಕುಲಕರ್ಣಿ, ಶರಣು ಹೀರಾಪುರ, ವಿನೋದ ಮಣೂರ, ಬಲವಂತ ಕುಲಕರ್ಣಿ, ಶ್ರೀಶ ಹುಟಗಿ, ಶ್ರೀರಂಗ ಪುರಾಣಿಕ, ಈರಣ್ಣ ಬಿರಾದಾರ, ಸಂತೋಷ ಕಳಿಗುಡ್ಡ, ರಮೇಶ ಉಳ್ಳಾಗಡ್ಡಿ, ರೋಷ್ಟತ್ತಮ ಅರ್ಜುಣಗಿ, ಮಯೂರ ತಿಳಗೂಳಕರ, ಕೇಶವ ಕುಲಕರ್ಣಿ, ಸತೀಶ ಪಾಟೀಲ, ರಾಹುಲ್ ರೋಹಿಡೆಕರ ಮುಂತಾದ ಇತಿಹಾಸ ಆಸಕ್ತರು ಉಪಸ್ಥಿತರಿದ್ದರು.

### ಸಿಂದಗಿ ಜಿಲ್ಲಾ ಹೋರಾಟ ಸಮಿತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲರಿಗೆ ಮನವಿ

# ಜಿಲ್ಲೆ ವಿಭಜಿಸುವುದಾದಲ್ಲಿ ಸಿಂದಗಿಗೆ ಆದ್ಯತೆ ನೀಡಲು ಮನವಿ

ಉದಯರಶ್ಮಿ ನ್ಯೂಸ್

ಸಿಂದಗಿ: ಜಿಲ್ಲೆಯನ್ನು ವಿಭಜಿಸುವುದಾದಲ್ಲಿ ಸಿಂದಗಿಗೆ ಆದ್ಯತೆ ನೀಡುವಂತೆ ಒತ್ತಾಯಿಸಿ ಸಿಂದಗಿ ಜಿಲ್ಲಾ ಹೋರಾಟ ಸಮಿತಿಯಿಂದ ವಿಜಯಪುರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರಿಗೆ ಶನಿವಾರ ಸಂಜೆ ಮನವಿ ಸಲ್ಲಿಸಲಾಯಿತು.

ಶಾಸಕ ಅಶೋಕ ಮನಗೂಳಿ, ಮಾಜಿ ಶಾಸಕರಾದ ರಮೇಶ ಭೂಸನೂರ ಹಾಗೂ ಅರುಣ ಶಹಾಪೂರ ಅವರು ಸಚಿವರಿಗೆ ಇಂಡಿ ಜಿಲ್ಲೆಯನ್ನಾಗಿ ಸೃಜಿಸುವ ನಿಟ್ಟಿನಲ್ಲಿ, ಇಂಡಿ ಬದಲಾಗಿ ಸಿಂದಗಿಯನ್ನು ಪರಿಗಣಿಸಿ ಎಂಬ ರಾಜಕೀಯ ಕೂಗು ನಮ್ಮದಾಗಿಲ್ಲ. ಈ ವಿಷಯದಲ್ಲಿ ನಾವು ರಾಜಕೀಯ ಮಾಡಲಾರೆವು. ಒಂದು ವೇಳೆ ವಿಜಯಪುರ ಜಿಲ್ಲೆಯನ್ನು ಇಬ್ಭಾಗಿಸುವ ಇರಾದೆ ಸರ್ಕಾರದದ್ದಾರೆ, ಜಿಲ್ಲೆಯಾಗುವ ಎಲ್ಲ ಅರ್ಹತೆಗಳನ್ನು ಹೊಂದಿರುವ ಸಿಂದಗಿಯನ್ನು ಆದ್ಯತೆಯನ್ನಾಗಿಸಿ ಜಿಲ್ಲೆ ಮಾಡಬೇಕು ಎಂದು ಸಚಿವರಿಗೆ ಮನವಿ ಮಾಡಿ, ಈ ಹೋರಾಟ ಸಮಿತಿಯಿಂದ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲು ತಾವುಗಳು ಅವಕಾಶ ಒದಗಿಸುವುದರೊಂದಿಗೆ ನಮ್ಮ ಬೇಡಿಕೆಯನ್ನು ಬೆಂಬಲಿಸಬೇಕು ಎಂದು ಒತ್ತಾಯಿಸಿದರು.

ಸಮಿತಿಯ ಮನವಿ ಸ್ವೀಕರಿಸಿದ ಸಚಿವರು, ಸಧ್ಯ ಲೋಕಸಭೆ ಚುನಾವಣೆ ಹತ್ತಿರವಾಗುತ್ತಿದ್ದು, ಜಿಲ್ಲಾ ವಿಭಜನೆ ಕುರಿತು ಸರ್ಕಾರದ ಮುಂದೆ ಯಾವ ಪ್ರಸ್ತಾವಗಳೂ ಇಲ್ಲ. ನಿಮ್ಮ ಹೋರಾಟಕ್ಕೆ ಆದ್ಯತೆಯೂ ಸಿಗದು. ಚುನಾವಣೆ ಮುಗಿದ ನಂತರದಲ್ಲಿ ನಿಮ್ಮ ಬೇಡಿಕೆಯನ್ನು ಸರ್ಕಾರಕ್ಕೆ ತಿಳಿಸಿ, ಜಿಲ್ಲೆ ಇಬ್ಭಾಗಿಸಿದರೆ ಮಾತ್ರ ಸಿಂದಗಿಯನ್ನು ಜಿಲ್ಲೆ ಮಾಡಿ ಎಂಬ ಬೇಡಿಕೆಯನ್ನು ಪರಿಗಣಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಅಶೋಕ ಅಲ್ಲಾಪೂರ, ಅಶೋಕ ವಾರದ, ಚಂದ್ರಶೇಖರ ನಾಗೂರ, ಯಶವಂತ್ರಾಯಗೌಡ ರೂಗಿ, ದಸ್ತಗೀರಸಾಬ ನಧಾಪ್, ಎಂ.ಎ.ಖತೀಬ, ಎಚ್.ಕೆ.ನಧಾಪ್, ಶಾಂತಪ್ಪ ರಾಣಾಗೋಳ, ಆನಂದ ಶಾಬಾದಿ, ಭೀಮಾಶಂಕರ ನೆಲ್ಲಗಿ, ಮಲ್ಲಿಕಾರ್ಜುನ ಅಲ್ಲಾಪೂರ, ಸಾಯಬಣ್ಣ ದೇವರಮನಿ, ಸಂತೋಷ ಮಣಗಿರಿ, ಮಹಾಂತೇಶ ನೂಲಾನವರ, ಮೋದಿನ್ ಜಮಾದಾರ, ಅಶಿಫ್ ಅಂದೇಲಿ, ಶೈಲಜಾ ಸ್ಥಾವರಮಠ, ಮಹಾನಂದ ಬಮ್ಮಣ್ಣಿ, ಮಹಾದೇವಿ ಹಿರೇಮಠ, ಸುನಂದಾ ಯಂಪೂರೆ, ಪ್ರತಿಭಾ ಚಳ್ಳಗಿ, ಶ್ರೀಧರ ಬಮ್ಮಣ್ಣಿ, ಬಸು ಕಾಂಬಳೆ, ಸೇರಿದಂತೆ ಇತರರಿದ್ದರು.

### ಬಿಚ್ಚಿಬಿದ್ದಿರುವ ಸಲಕರಣೆಗಳು । ಪುಂಡರ ಕಾಟ । ಪುರಸಭೆ ಕಡೆಗಣನೆ

# ಹುಡ್ಕೋ ಬಡಾವಣೆ ಉದ್ಯಾನವನ ಅದ್ವಾನ

ಉದಯರಶ್ಮಿ ನ್ಯೂಸ್

– ಚೇತನ ಶಿವಶಿಂಪಿ

ಮುದ್ದೇಬಿಹಾಳ: ಮುರಿದು ಹೋದ ಜಾರುಬಂಡೆಯ ಮುಖ್ಯ ಪ್ಲಾಸ್ಟಿಕ್, ಕಬ್ಬಿಣದ ಸಳಿಗಳು ಕಿತ್ತಿದ ಜೋಕಾಲಿಗೆ ಅವೈಜ್ಞಾನಿಕ ವೈರ್ ಬಿಗಿತ, ಬಿಚ್ಚಿಬಿದ್ದಿರುವ ನಟ್ಟನ್ನು ಫಿಟ್ ಮಾಡೋರಿಲ್ಲ, ಮತ್ತೊಂದು ಜೋಕಾಲಿಗೆ ಕಟ್ಟಿಗೆಯ ತುಂಡನ್ನು ಬಳಸಿ ಆಟಕ್ಕೆ ನಿಲ್ಲೋ ಮಕ್ಕಳು, ಒಂದು ಕಡೆ ಕೂರುವ ಸೀಟೆ ಇಲ್ಲದ ಮತ್ತೊಂದು ಆಟದ ಸಲಕರಣೆ, ದಿನನಿತ್ಯ ನೂರಾರು ಮಕ್ಕಳು ಆಟವಾಡಿ ಸುಸ್ತಾಗಿ ಆನಂದ ಪಡೋದು ಇದೇ ಉದ್ಯಾನವನದಲ್ಲಿ.

ಪಟ್ಟಣಕ್ಕೇ ಒಂದೇ ಇರೋ ಪ್ರಸಿದ್ಧ ಉದ್ಯಾನವನ ಹುಡ್ಕೋ ಬಡಾವಣೆಯದ್ದು. ಕಳೆದ ನಾಲ್ಕು ವರ್ಷಗಳ ಹಿಂದೆ ಅಭಿವೃದ್ಧಿಗೊಂಡು ಜನಪ್ರೀಯತೆ ಪಡೆದಿತ್ತು. ಇಂದಿಗೂ ಸಾಕಷ್ಟು ಜನಪ್ರೀಯತೆ ಪಡೆದಿದೆ. ಆದರೆ ಸಧ್ಯ ನಿರ್ವಹಣೆಯ ಕೊರತೆಯಿಂದಾಗಿ ಈ ಉದ್ಯಾನವನ ಸಂಪೂರ್ಣ ನಿರ್ಲಕ್ಷಕ್ಕೊಳಗಾಗಿ ಅನಾಥ ಸ್ಥಿತಿಗೆ ಬಂದು ತಲುಪಿದೆ.

ನಿರೀಕ್ಷಿತ ಮಟ್ಟದ ನಿರ್ವಹಣೆ ಸಂಪೂರ್ಣ ವಂಚನೆಗೊಂಡಿದೆ. ಇನ್ನು ಕುಡಿಯುವ ನೀರಂತೂ ಇಲ್ಲಿಯವರೆಗೂ ಕಂಡಿಲ್ಲ ಈ ಉದ್ಯಾನವನವನ್ನು ಸಂಪೂರ್ಣವಾಗಿ ಕಡೆಗಣಿಸಿದ್ದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಇನ್ನಾದರೂ ಸಂಬಂಧಿಸಿದ ಅಧಿಕಾರಿಗಳು ಉದ್ಯಾನವನದಲ್ಲಿನ ಅವ್ಯವಸ್ಥೆಯನ್ನು ಪರಿಶೀಲಿಸಿ ಅಭಿವೃದ್ಧಿಗೆ ಮುಂದಾಗಬೇಕು. ಉದ್ಯಾನವನವು ಮಕ್ಕಳ ಮತ್ತು ಹಿರಿಯ ನಾಗರೀಕರ ವಿಶ್ರಾಂತಿ ತಾಣವಾಗಿ ಪರಿವರ್ತಿಸಬೇಕು.

> "ಕರೆಂಟ್ ವ್ಯವಸ್ಥೆ ಇಲ್ಲದೇ ಕತ್ತಲಾಗುತ್ತಿದ್ದಂತೆ ಪುಂಡ ಪೋಕರಿಗಳ ಹಾವಳಿ ಹೆಚ್ಚಾಗಿದೆ. ಕರೆಂಟ್ ನ ವ್ಯವಸ್ಥೆ ಮಾಡಿ ಎಂದು ಸಂಬಂಧಿಸಿದವರಿಗೆ ಹೇಳಿ ಹೇಳಿ ಸುಸ್ತಾಗಿದ್ದೇವೆ ಹೊರತು, ಯಾವುದೇ ಬೆಳವಣಿಗೆಗಳು ಕಾಣಿಸಿಲ್ಲ. ಈಗಲಾದರೂ ಸುಧಾರಿಸುತ್ತೆ ಎಂಬ ಭರವಸೆಯಲ್ಲಿದ್ದೇವೆ."
>
> – ಬಿ.ಎಸ್.ಮೇಟಿ, ಉದ್ಯಾನವನದ ಹತ್ತಿರದ ನಿವಾಸಿ

ಸೇರಿದಂತೆ ಅಭಿವೃದ್ಧಿಯಿಂದ ಉದ್ಯಾನವನದ ದಿನನಿತ್ಯದ ಭೇಟಿಕಾರರು. ಸಂಜೆಯಾದರೆ ಸಾಕು ಪುಂಡ ಪೋಕರಿಗಳ ಗ್ಯಾಂಗ್, ಕರೆಂಟ್ ಇಲ್ದೆ ಇನ್ನಾದರೂ ಸಂಬಂಧಿಸಿದ ಅಧಿಕಾರಿಗಳು ಉದ್ಯಾನವನದಲ್ಲಿನ ಅವ್ಯವಸ್ಥೆಯನ್ನು ಪರಿಶೀಲಿಸಿ ಅಭಿವೃದ್ಧಿಗೆ ಮುಂದಾಗಬೇಕು. ಉದ್ಯಾನವನವು ಮಕ್ಕಳ ಮತ್ತು ಹಿರಿಯ ನಾಗರೀಕರ ವಿಶ್ರಾಂತಿ ತಾಣವಾಗಿ

> "ದಿನನಿತ್ಯ ನೂರಾರು ಮಕ್ಕಳು ಇಲ್ಲಿ ಆಟವಾಡ್ತಾರೆ. ಆಟಿಕೆಗಳು ಅಳವಡಿಕೆಗೊಂಡ ನಂತರದಿಂದ ಇಲ್ಲಿಯವರೆಗೆ ಯಾವುದೇ ನಿರ್ವಹಣೆ ಇಲ್ಲ. ಚಿಕ್ಕ ಪುಟ್ಟ ನಟ್‌ಬೋಲ್ಟಗಳನ್ನೂ ಸರಿ ಪಡಿಸೋರು ಇಲ್ಲ. ಮಕ್ಕಳು ಬಿದ್ದು ಗಾಯಗೊಂಡ ಉದಾಹರಣೆಗಳಿವೆ. ಈ ಕೂಡಲೇ ಇವುಗಳನ್ನು ಸರಿಪಡಿಸಲು ಸಂಬಂಧಿಸಿದವರು ಮುಂದಾಗಬೇಕು."
>
> – ನಾಗಭೂಷಣ ನಾವದಗಿ, ಉದ್ಯಾನವನದ ದಿನನಿತ್ಯದ ಭೇಟಿಕಾರರು

> "ಪಟ್ಟಣಕ್ಕೇ ಹೆಸರುವಾಸಿಯಾದ ಉದ್ಯಾನವನ ಇದಾಗಿದೆ. ಇಲ್ಲೊಂದು ಕುಡಿಯುವ ನೀರಿನ ಆರೋ ಪ್ಲಾಂಟ್ ಘಟಕ ಸ್ಥಾಪನೆಯಾದರೆ ಸಾರ್ವಜನಿಕರಿಗೂ ಸೇರಿದಂತೆ ಉದ್ಯಾನವನಕ್ಕೂ ಅನುಕೂಲವಾಗಲಿದೆ."
>
> – ವಿ.ಎಸ್.ಇಟಗಿ, ವೈದ್ಯರು

> "ಉದ್ಯಾನವನದ ಸಮಸ್ಯೆ ನನ್ನ ಗಮನಕ್ಕೆ ಬಂದಿದೆ. ಈಗಾಗಲೇ ಹೈ ಮಾಸ್ಕ್ ಲೈಟ್ ಅಳವಡಿಸಿದ್ದೇವೆ. ಪರಿಕರಗಳನ್ನು ಸರಿಪಡಿಸಲು ಕೂಡಲೇ ಯೋಜನೆಯನ್ನು ರೂಪಿಸುತ್ತೇನೆ."
>
> – ಮಲ್ಲನಗೌಡ ಬಿರಾದಾರ, ಪುರಸಭೆ ಮುಖ್ಯಾಧಿಕಾರಿ

> ಯಾವುದೇ ಭಯವಿಲ್ಲದೇ ಮಕ್ಕಳು ಆಟಕ್ಕೆ ಇಳಿದೇ ಬಿಡ್ತಾರೆ. ಆದರೆ ಇಲ್ಲಿನ ಆಟದ ಸಾಮಾನುಗಳು ಯಾರಿಗೆ ಯಾವ ಗಾಯ ಮಾಡ್ಬೇಕು ಅಂತಾ ಕಾಯ್ಕೊಂಡು ಕುಳಿತಿವೆ. ಬಿಕ್ಕ ಪುಟ್ಟ ಸಮಸ್ಯೆಗಳನ್ನೂ ಸರಿಪಡಿಸಿ ಒಂದೆರಡು ಹೊಸ ಆಟಿಕೆಗಳನ್ನು ಅಳವಡಿಸಿ, ಲೈಟ್ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ರೆ ಈ ಉದ್ಯಾನವನ ಮತ್ತಷ್ಟು ಮೆರಗು ಪಡೆದುಕೊಳ್ಳುತ್ತೆ. ಈ ಕೂಡಲೇ ಪುರಸಭೆ ಎಚ್ಚೆತ್ತು ಈ ಉದ್ಯಾನವನದ ಸಚ್ಛತೆ ಸೇರಿದಂತೆ ಅಭಿವೃದ್ಧಿಯತ್ತ ಗಮನ ಹರಿಸಬೇಕು ಅನ್ನೋದು 'ಉದಯರಶ್ಮಿ' ಪತ್ರಿಕೆ ಆಶಯ.

ಹಾಗೂ ಪುಂಡ–ಪೋಕರಿಗಳ ಪ್ರವೇಶಕ್ಕೆ ಕಡಿವಾಣ ಹಾಕಬೇಕು ಎಂಬುದು ಬಡಾವಣೆಯ ನಿವಾಸಿಗಳ ಆಗ್ರಹವಾಗಿದೆ.

### ಖೈನೂರಲ್ಲಿ ಡಾ.ವಿಶ್ವರಾಧ್ಯ ಶ್ರೀ ಹೇಳಿಕೆ । ಮಡಿವಾಳೇಶ್ವರ ಪುರಾಣ ಪ್ರಾರಂಭೋತ್ಸವಕ್ಕೆ ಚಾಲನೆ

# ದಾನ–ಧರ್ಮ ಮಾಡುವ ಭಾವನೆ ನಮ್ಮದಾಗಲಿ

ಉದಯರಶ್ಮಿ ನ್ಯೂಸ್

ಬ್ರಹ್ಮದೇವನಮಡು: ಪ್ರತಿಯೊಬ್ಬರೂ ಜೀವನದಲ್ಲಿ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡಾಗ ಬದುಕು ಸಾರ್ಥಕವಾಗುತ್ತದೆ ಎಂದು ಮಾಗಣಗೇರಿಯ ಬೃಹನ್ಮಠದ ಶಿವಾಚಾರ್ಯ ರತ್ನ ಪ್ರಶಸ್ತಿ ಪುರಸ್ಕೃತ ಡಾ.ವಿಶ್ವರಾಧ್ಯ ಶಿವಾಚಾರ್ಯರು ಹೇಳಿದರು.

ಸಿಂದಗಿ ತಾಲೂಕಿನ ಸುಕ್ಷೇತ್ರ ಖೈನೂರ ಗ್ರಾಮದ ಗೊಲ್ಲಾಳೇಶ್ವರ ಜಾತ್ರೆ ಹಾಗೂ ಮಹಾಶಿವರಾತ್ರಿ ಅಂಗವಾಗಿ ಶನಿವಾರ ರಾತ್ರಿ ಹಮ್ಮಿಕೊಂಡಿದ್ದ ಕಡಕೋಳ ಮಡಿವಾಳೇಶ್ವರ ಪುರಾಣ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಪುರಾಣ ಪ್ರವಚನ ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ ಲಭಿಸುತ್ತದೆ. ಸಮಾಜದ ಉದ್ಧಾರಕ್ಕಾಗಿ ಶ್ರಮಿಸಿದ ಮಹಾಪುರಷರ ಜೀವನ ಚರಿತ್ರೆ ತಿಳಿಯಲು ಎಲ್ಲರೂ ಮುಂದಾಗಬೇಕು. ಬದುಕಿನಲ್ಲಿ ದಾನ–ಧರ್ಮ ಮಾಡುವ ಮನೋಭಾವ ಬೆಳಿಸಿಕೊಳ್ಳಬೇಕು ಎಂದರು.

ಯಡ್ರಾಮಿ ತಾಲೂಕಿನ ಕಡಕೋಳ ಮಡಿವಾಳೇಶ್ವರ ಮಹಾ ಮಠದ ಡಾ.ರುದ್ರಮುನಿ ಶಿವಾಚಾರ್ಯರು ಮಾತನಾಡಿ, ತಾಯಂದಿರು,ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಜತೆಗೆ ಸಂಸ್ಕಾರ, ಸಂ

# ಅಂಕಿತ ಸಾಹಿತ್ಯಕ್ಕೆ ಅಡಿಪಾಯ ಹಾಕಿದ ಕೇಶಿರಾಜ :ಡಾ.ಮಠ

ಉದಯರಶ್ಮಿ ನ್ಯೂಸ್

ಯಡ್ರಾಮಿ: ಭಕ್ತಿ ಪರಂಪರೆಗೆ ಮತ್ತು ಅಂಕಿತ ಸಾಹಿತ್ಯಕ್ಕೆ ಅಡಿಪಾಯ ಹಾಕಿದ ಕೀರ್ತಿ ಕೊಂಡಗೂಳಿ ಕೇಶಿರಾಜನಿಗೆ ಸಲ್ಲುತ್ತದೆ ಎಂದು ಉಪನ್ಯಾಸಕ ಡಾ। ಕಾಶಿಲಿಂಗಯ್ಯ ಮಠ ಹೇಳಿದರು.

ಯಡ್ರಾಮಿಯ ಸಗರಾದ್ರಿ ಸಾಂಸ್ಕೃತಿಕ ಸಂಗಮ ಟ್ರಸ್ಟ್ ಹಾಗೂ ಶ್ರೀ ಮುರಘೇಂದ್ರ ಶಿವಯೋಗಿ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಿದ್ದ ಹುಣ್ಣಿಮೆಯ ಸಂಗಮ –57ರ ಆನ್ಲೈನ್ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೊಂಡಗೂಳಿ ಕೇಶಿರಾಜ ಬಸವಪೂರ್ವದ ವೀರಶೈವ ಕವಿ. 11ನೇ ಶತಮಾನದ ಆರಂಭದ ಕಾಲಘಟ್ಟದಲ್ಲಿ ಕಲ್ಯಾಣ ಚಾಲುಕ್ಯರ ಅರಸ 6ನೇ ವಿಕ್ರಮಾದಿತ್ಯನ ಅರಸೊತ್ತಿಗೆಯಲ್ಲಿ ಮಹಾದಂಡನಾಯಕನಾಗಿ, ಸಂದಿವಿಗ್ರಹಿಯಾಗಿ ಕೆಲಸ ಮಾಡುವುದರ ಜೊತೆಗೆ ಕೇಶಿರಾಜ ಒಬ್ಬ ಅಪ್ರತಿಮ ಶಿವಭಕ್ತನಾಗಿದ್ದನು. ಈ ಕೊಂಡಗೂಳಿ ಕೇಶಿರಾಜ ಯಡ್ರಾಮಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಕೊಂಡಗೂಳಿ ಈತನ ಹುಟ್ಟೂರು. ಶಿವಾನುಭವದ ಅತಿಯಾದ ಹಂಬಲದಿಂದ ಅರಸೊತ್ತಿಗೆಯನ್ನೇ ಧಿಕ್ಕರಿಸಿ ಹುಟ್ಟೂರು ಕೊಂಡಗೂಳಿ ಗ್ರಾಮಕ್ಕೆ ಬಂದು ನೆಲೆ ನಿಲ್ಲುತ್ತಾನೆ. ಕೇಶಿರಾಜನು ಮಂತ್ರ ಮಹತ್ವದ ಕಂದ, ಶೀಲ ಮಹತ್ವದ ಕಂದ, ಸೇರಿದಂತೆ ಏಳಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾನೆ. ಓಂ ನಮಃ ಶಿವಾಯ ಈತನ ಕಂದ ಪದ್ಯಗಳ ವಚನಾಂಕಿತವಾಗಿದೆ. ಬಸವಣ್ಣನ ಪೂರ್ವದಲ್ಲಿಯೇ ಕಾಯಕ, ದಾಸೋಹ ಎನ್ನುವ ಪದಗಳನ್ನು ಕೇಶಿರಾಜ ಬಳಕೆ ಮಾಡಿದ್ದು ಆತನ ಕೃತಿಗಳ ಅಧ್ಯಯನದಿಂದ ತಿಳಿದುಬರುತ್ತದೆ. ಶಿವನ ಪರಮ ಭಕ್ತನಾಗಿ ವೀರಶೈವ ಕವಿಗಳಲ್ಲಿಯೇ ಅಗ್ರಗಣ್ಯನಾಗಿ ಕೇಶಿರಾಜ ಕನ್ನಡ ಸಾಹಿತ್ಯ ಜಗತ್ತಿಗೆ ಕೀರ್ತಿ ತಂದು ಕೊಟ್ಟಿದ್ದಾನೆ ಎಂದರು.

ಇಂತಹ ಚಾರಿತ್ರಿಕ ಕವಿಯ ಸಮಾಧಿ ಸ್ಥಳವನ್ನು ಸರ್ಕಾರ ಅಭಿವೃದ್ಧಿ ಮಾಡುವಲ್ಲಿ ಮುತುವರ್ಜಿ ವಹಿಸುವಂತೆ ಮನವಿ ಮಾಡಿದರು.

ನಂತರ, ಆನ್ಲೈನ್ ಹುಣ್ಣಿಮೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಸಿದ್ಧಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಭುಲಿಂಗಯ್ಯ ಮಠ, ಹಬೀಬ್ ಮುಲ್ಲಾ, ಪ್ರಕಾಶ ಸಾಹು ಬೆಲ್ಲದ, ಬಿ.ಬಿ.ವಾರದ, ಆರ್.ಜಿ.ಪುರಾಣಿಕ, ವಿಜಯೇಂದ್ರ ಕುಲಕರ್ಣಿ, ಪ್ರಶಾಂತ ಕುನ್ನೂರ, ಸುಧೀಂದ್ರ ಕುಲಕರ್ಣಿ, ಪ್ರಹ್ಲಾದ ಪತ್ತಾರ, ಗೊಲ್ಲಾಳಪ್ಪ ಪತ್ತಾರ, ವೀರಭದ್ರ ಪತ್ತಾರ, ದೇವು ಮಡಿವಾಳರ, ಮಲ್ಲಿಕಾರ್ಜುನ ಯಾದಗಿರಿ, ಗೊಲ್ಲಾಳಪ್ಪ ನವಲಗುಂದ, ಇತರರು ಇದ್ದರು. ಡಾ। ಸಂತೋಷ ನವಲಗುಂದ ನಿರೂಪಿಸಿ, ವಂದಿಸಿದರು.

# ವಿದ್ಯೆ ಇಲ್ಲದೆ ಯಾವ ಸಾಧನೆಯೂ ಸಾಧ್ಯವಿಲ್ಲ :ಕೊಣ್ಣೂರ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ವಿದ್ಯೆ ಇಲ್ಲದೇ ಯಾವ ಸಾಧನೆಯನ್ನೂ ಸಾಧಿಸಲು ಸಾಧ್ಯವಿಲ್ಲ. ವಿದ್ಯೆ ಪಡೆದ ವ್ಯಕ್ತಿ ಜಗತ್ತೇ ತನ್ನತ್ತ ತಿರುಗಿ ನೋಡುವಂತೆ ಮಾಡಬಲ್ಲ ಶಕ್ತಿ ಹೊಂದಿರುತ್ತಾನೆ ಎಂದು ಹಿರಿಯ ಪತ್ರಕರ್ತ, ಸಾಹಿತಿ ಪರಶುರಾಮ ಕೊಣ್ಣೂರ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆ ಎದುರು ಇರುವ ಆಕ್ಷರ್ಡ ಪಬ್ಲಿಕ್ ಸ್ಕೂಲ್ ಹಾಗೂ ಹೇಮರಡ್ಡಿ ಮಲ್ಲಮ್ಮ ಹಿ.ಪ್ರಾ.ಶಾಲೆ ವತಿಯಿಂದ ಆಯೋಜಿಸಲಾಗಿದ್ದ ಸಾಂಸ್ಕೃತಿಕ ಉತ್ಸವ ಕಾರ್ಯಕ್ರಮದ ಮುಖ್ಯ ಅತಿಥಿ–ಯಾಗಿ ಅವರು ಮಾತನಾಡಿದರು.

ಹಿಂದಿನ ಕಾಲದಲ್ಲಿ ವಿದ್ಯೆ ಪಡೆಯಲು ಅದೆಷ್ಟೋ ಪರದಾಡುವ ಪರಿಸ್ಥಿತಿ ಇತ್ತು. ಸದ್ಯ ಯಾವ ಮಗುವೂ ವಿದ್ಯೆಯಿಂದ ವಂಚಿತರಾಗಬಾರದೆಂದು ಶೈಕ್ಷಣಿಕವಾಗಿ ಸಾಕಷ್ಟು ಬದಲಾವಣೆಗಳನ್ನು ತರಲಾಗಿದೆ. ಎಲ್ಲ ಪಾಲಕರೂ ತಮ್ಮ ಮಕ್ಕಳಿಗೆ ವಿದ್ಯೆ ಕೊಡಿಸುವಲ್ಲಿ ಹಿಂದೇಟು ಹಾಕಬಾರದು ಎಂದರು.

ನ್ಯಾಯವಾದಿ ಚೇತನ ಶಿವಶಿಂಪಿ ಮಾತನಾಡಿ, ಪಾಲಕರಾದವರು ಹಣಕ್ಕಿಂತ ವಿದ್ಯೆ, ಸಂಸ್ಕಾರಕ್ಕೆ ಹೆಚ್ಚಿನ ಮಹತ್ವ ಕೊಡಬೇಕು. ತಮ್ಮ ಮಕ್ಕಳಿಗಾಗಿ ಆಸ್ತಿ ಮಾಡದೇ ಮಕ್ಕಳನ್ನೇ ಆಸ್ತಿಯಾಗಿ ಬೆಳೆಸಬೇಕು. ಮಕ್ಕಳಿಗೆ ಹಣ ಹೇಗೆ ಸಂಪಾದನೆ ಮಾಡಬೇಕು ಎಂದು ಕಲಿಸುವದಕ್ಕಿಂತ ಉತ್ತಮ ಗುಣಗಳನ್ನು ಬೆಳೆಸಿ ನೊಂದವರ ದನಿಯಾಗಿ ನಿಲ್ಲುವ ಗಟ್ಟಿ ವ್ಯಕ್ತಿಯನ್ನಾಗಿ ತಯಾರಿಸಿದಲ್ಲಿ ನಿಮ್ಮ ಮಗುವನ್ನು ಸಮಾಜದಲ್ಲಿ ಗೌರವಯುತ ವ್ಯಕ್ತಿಯನ್ನಾಗಿ ನೋಡಲು ಸಾಧ್ಯವಿದೆ ಎಂದರು.

ಮಡಿಕೇಶ್ವರದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಬಸವರಾಜ ಹಂಚಲಿ ವಿಶೇಷ ಉಪನ್ಯಾಸ ನೀಡಿದರು.

ಕ್ಷೇತ್ರ ಸಮನ್ವಯಾಧಿಕಾರಿ ಯು.ಬಿ.ಧರಿಕಾರ, ಇಳಕಲ್ ನ ಡಯಟ್ ಉಪನ್ಯಾಸಕ ಎಂ.ಎಂ.ಬೆಳಗಲ್, ಸಂಸ್ಥೆಯ ಅಧ್ಯಕ್ಷ ಬಿ.ಎಂ.ಪಾಟೀಲ ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹೆಚ್ಚಿನ ಅಂಕ ಪಡೆದು ಆಯ್ಕೆಯಾದ ಶಾಲೆಯ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಮುರಾರ್ಜಿ ಶಾಲೆಯ ಪ್ರಾಂಶುಪಾಲ ಖೇಮು ರಾಠೋಡ, ನಿವೃತ್ತದೈಹಿಕ ಶಿಕ್ಷಕ ಎಚ್.ಎಲ್.ಕರಡ್ಡಿ, ಶಿಕ್ಷಕ ಎಂ.ಎಲ್.ಪಾಟೀಲ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರಾಮನಗೌಡ ಪಾಟೀಲ ಸೇರಿದಂತೆ ಮತ್ತೀತರರು ಇದ್ದರು. ಕಾರ್ಯಕ್ರಮದ ಬಳಿಕ ನಡೆದ ವಿದ್ಯಾರ್ಥಿಗಳ ಸಾಂಸ್ಕೃತಿಕ ಉತ್ಸವ ಗಮನ ಸೆಳೆಯಿತು.

# ರೇಲ್ವೆ ನಿಲ್ದಾಣಗಳ ಪುನರಾಭಿವೃದ್ಧಿಗೆ ಪ್ರಧಾನಿ ಚಾಲನೆ :ಸಂಸದ ಜಿಗಜಿಣಗಿ

ಉದಯರಶ್ಮಿ ನ್ಯೂಸ್

ವಿಜಯಪುರ: ದೇಶದ ಪ್ರಧಾನಮಂತ್ರಿಗಳು ಸಾಮಾಜಿ–ಕ ಜಾಲತಾಣ ಮೂಲಕ ಅಮೃತ ಭಾರತ ಯೋಜನೆ ಮೂಲಕ ದೇಶದ ವಿವಿಧ ನಿಲ್ದಾಣಗಳ ಪುನರಾಭಿವೃದ್ಧಿ, ರಸ್ತೆ ಮೇಲ್ಸೇತುವೆ ಹಾಗೂ ಕೆಳಸೇತುವೆಗಳ ಸಮರ್ಪಣೆ, ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದ್ದು, ದೇಶದ ರೈಲು ನಿಲ್ದಾಣಗಳು ಅತ್ಯಾಧುನಿಕ ತಂತ್ರಜ್ಞಾನದಿಂದ ಸುಂದರ, ಸ್ವಚ್ಛ ಅಂತರಾಷ್ಟ್ರೀಯ ಗುಣಮಟ್ಟದ ಸಾರ್ವಜನಿಕರಿಗೆ ಉತ್ತಮ ಮೂಲಭೂತ ಸೌಕರ್ಯಗಳಿಂದ ಕೂಡಿದ ರೈಲು ನಿಲ್ದಾಣವಾಗಿ ರೂಪಗೊಳ್ಳಲಿದೆ ಎಂದು ಸಂಸದ ರಮೇಶ ಜಿಗಜಿಣಗಿ ಅವರು ಹೇಳಿದರು.

ಸೋಮವಾರ ನಗರದ ರೈಲ್ವೇ ನಿಲ್ದಾಣದಲ್ಲಿ ಏರ್ಪಡಿಸಿದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹುಬ್ಬಳ್ಳಿ ವಿಭಾಗದ ನವೀಕರಣಗೊಂಡಿರುವ 7 ನಿಲ್ದಾಣಗಳು ಮತ್ತು ಮೇಲ್ಸೇತುವೆ ಹಾಗೂ ಕೆಳಸೇತುವೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಮಂತ್ರಿಗಳು ಲೋಕಾರ್ಪಣೆಗೊಳಿಸಿದ್ದಾರೆ. ಜಿಲ್ಲೆಯ ವಿಜಯಪುರ ಮತ್ತು ಆಲಮಟ್ಟಿ ರೇಲ್ವೆ ನಿಲ್ದಾಣಗಳ ಪುನರ್ಅಭಿವೃದ್ಧಿಗೆ ಶಂಕು ಸ್ಥಾಪನೆ ಹಾಗೂ ಮಿಂಚನಾಳ, ಕ್ಯಾತನಕೇರಿ ಮತ್ತು ನಿಂಬಾಳ ರೇಲ್ವೆ ಅಂಡರ್ಪಾಸ್ಗಳನ್ನು ಇಂದು ಸಮರ್ಪಿಸಲಾಗಿದೆ ಎಂದು ಹೇಳಿದರು.

ವಿಜಯಪುರ ಜಿಲ್ಲೆಗೆ ಈಗಾಗಲೇ ಗದಗ ವರೆಗೆ ದ್ವೀಪಥ ಹಳಿಗಳ ಜೋಡಣೆ ಹಾಗೂ ರೈಲ್ವೇ ವಿದ್ಯುದ್ದೀಕರಣ–ಕ್ಕೆ ಕ್ರಮಕೈಗೊಳ್ಳಲಾಗಿದೆ. ರೈಲುಗಳ ದಟ್ಟಣೆಯನ್ನು ಸರಳೀಕರಣಗೊಳಿಸಲು ಅಲಿಯಾಬಾದ ಹತ್ತಿರ ಗೂಡ್ಶೆಡ್ನ್ನು ನಿರ್ಮಿಸಿ ಕಾರ್ಯಾರಂಭವಾಗಿವೆ ಇನ್ನೂ ಹೆಚ್ಚು ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದು ಅವರು ಹೇಳಿದರು.

ಅಮೃತ್ ಭಾರತ ಯೋಜನೆ ಸ್ಕೀಂ ಅಡಿ ರೈಲ್ವೇ ಸ್ಟೇಷನ ಸ್ಥಿತಿ ಗತಿ ಕುರಿತು ವಿವಿಧ ಶಾಲಾ ಮಕ್ಕಳಿಗಾಗಿ ಪ್ರಬಂಧ ಸ್ಪರ್ಧೆ ಹಾಗೂ ಇತರ ಸ್ಪರ್ದೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ರೈಲ್ವೆ ಇಲಾಖೆ ಅಧಿಕಾರಿಗಳಾದ ಸೀನಿಯರ್ ಡಿವಿಜಿನಲ್ ಪರ್ಸನಲ್ ಆಫೀಸರ್ ಆಸೀಪ್ ಹಪೀಜ್, ಅಡಿಷನಲ್ ಡಿವಿಜನ್ ರೈಲ್ವೇ ಮ್ಯಾನೇಜರ್ ಸಂಜಯ ಕುಮಾರ ಸಿಂಗ್, ಸ್ಟೇಷನ್ ಮಾಸ್ಟರ್ ಪಿ.ಟಿ ನಾಯಕ, ಮುಖ್ಯ, ವಿ.ಬಿ ಗ್ರಾಮಪುರೋಹಿತ ರೈಲ್ವೇ ಸಿಬ್ಬಂದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಆಲಮೇಲ ಹಾಗೂ ಸಿಂದಗಿ ತಾಲೂಕಿನ ವಿವಿಧ ಸ್ಥಳಗಳಿಗೆ ಭೇಟಿ–ಪರಿಶೀಲನೆ

# ಕುಡಿವ ನೀರಿಗೆ ಆದ್ಯತೆ ನೀಡಿ :ಜಿಪಂ ಸಿಇಒ ರಿಷಿ ಆನಂದ

ಉದಯರಶ್ಮಿ ನ್ಯೂಸ್

ವಿಜಯಪುರ: ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕುಡಿಯುವ ನೀರಿಗೆ ಪ್ರಥಮಾದ್ಯತೆ ನೀಡಿ, ಸಮರ್ಪಕವಾಗಿ ಕುಡಿಯುವ ನೀರು ಪೂರೈಸಬೇಕು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಫೆ.24ರಂದು ಸಿಂದಗಿ ಹಾಗೂ ಆಲಮೇಲ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ವಿವಿಧ ಇಲಾಖೆಗಳಡಿ ಕೈಗೊಂಡ ಕಾಮಗಾರಿಗಳ ಪರಿಶೀಲನೆ ನಡೆಸಿದ ಅವರು, ಕುಡಿಯುವ ನೀರು ಒದಗಿಸಲು ಕ್ರಮವಹಿಸಿಬೇಕು. ಯಾವುದೇ ರೀತಿಯ ಸಮಸ್ಯೆಯಾಗದಂತೆ ಗಮನ ಹರಿಸಿ ಕಾರ್ಯ ನಿರ್ವಹಿಸಬೇಕು ಎಂದು ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಆಲಮೇಲ ತಾಲೂಕಿನ ಕಡಣಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮದನಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ಮಾಣಗೊಂಡ ಶಾಲಾ ಆಟದ ಮೈದಾನ, ಶೌಚಾಲಯ, ಶಾಲಾ ಕಾಂಪೌಂಡ್ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಪರಿಶೀಲಿಸಿ, ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಆದ್ಯತಾನುಸಾರ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶಾಲಾ ಕೊಠಡಿ ವೀಕ್ಷಿಸಿ ಅಗತ್ಯ ವಿದ್ಯುತ್ ಸಂಪರ್ಕ, ಕುಡಿಯುವ ನೀರು ಇರುವಂತೆ ನಿಗಾವಹಿಸಬೇಕು. ಕಲಿಕಾ ಗುಣಮಟ್ಟ ಕಾಪಾಡಿಕೊಳ್ಳಬೇಕು. ಪಾಠದಲ್ಲಿ ಪರಿಹಾರ ಬೋಧನಾ ಕ್ರಮ ಅನುಸ–ರಿಸಬೇಕು. ಕಲಿಕಾ ಚಟುವಟಿಕೆಗೆ ಒತ್ತು ನೀಡಬೇಕು. ಕಲಿಕೆಗೆ ಪೂರಕವಾಗಿ ಬೋಧನಾ ಸಾಮಗ್ರಿಗಳ ಲಭ್ಯತೆ ಖಚಿತಪಡಿಸಿಕೊಳ್ಳಬೇಕು. ಬೋಧನಾ ಸಾಮಗ್ರಿಯೊಂದಿಗೆ ಪಾಠ ಮಾಡಬೇಕು ಎಂದು ಶಾಲಾ ಶಿಕ್ಷಕರಿಗೆ ಸಲಹೆ ನೀಡಿದರು.

ಕೊಕಟನೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೂಸಿನ ಮನೆ –ಶಿಶು ಪಾಲನ ಕೇಂದ್ರಕ್ಕೆ ಭೇಟಿ ನೀಡಿ, ಮಕ್ಕಳ ಕಲಿಕಾ ಗುಣಮಟ್ಟ ಹಾಗೂ ಮಕ್ಕಳಿಗೆ ಆಹಾರ ವಿತರಿಸುವ ಸಮಯ, ಮಕ್ಕಳ ಲಾಲನೆ–ಪಾಲನೆ, ಮಕ್ಕಳ ದಾಖಲಾತಿ ಮತ್ತು ಹಾಜರಾತಿ ಪರಿಶೀಲಿಸಿದರು. ಅಲ್ಲಿರುವ ಮಕ್ಕಳ ಆರೈಕೆದಾರ–ರಿಗೆ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು ಉತ್ತಮವಾಗಿ ಕಾರ್ಯ ನಿರ್ವಹಿಸಬೇಕು. ಮಕ್ಕಳ ಆರೈಕೆ ವಿಷಯದಲ್ಲಿ ನಿರ್ಲಕ್ಷ ▯▯ ವಹಿಸಬಾರದು. ಸರಿಯಾದ ಸಮಯಕ್ಕೆ ಆಹಾರ ಒದಗಿಸುವುದು. ಮಕ್ಕಳಿಗೆ ಸ್ವಚ್ಛತೆ, ಅಕ್ಷರಾಭ್ಯಾಸ ಮಾಡಿಸುವ ನಿಟ್ಟಿನಲ್ಲಿಯೂ ಕಾರ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಿಂದಗಿ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮು ಜಿ ಅಗ್ನಿ, ಆಲಮೇಲ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಫರೀದಾ ಪಠಾಣ, ಸಹಾಯಕ ನಿರ್ದೇಶಕ ನಿತ್ಯಾನಂದ ಯಲಗೋಡ, ಆಲಮೇಲ ತಾಲೂಕಿನ ಸಹಾಯಕ ನಿರ್ದೇಶಕ ಸಿದ್ದರಾಮ ಅಂಕಲಗಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಸ್.ಆರ್ ಸ್ವಾಮಿ, ಪಂಚಾಯತ್ ರಾಜ್ ವಿಭಾಗದ ಸಹಾಯಕ ನಿರ್ದೇಶಕ ಎ.ಎ.ದುರ್ಗದ, ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಜಿ.ವೈ ಮುರಾಳ, ಸಿಂದಗಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಂಭುಲಿಂಗ ಹಿರೇಮಠ, ಕೊಕಟನೂರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಸಂತ ಅಮೀನಗಡ, ಕಡಣಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶರಣಗೌಡ ಕಡ್ಲೇವಾಡ, ಗ್ರಾಮ ಪಂಚಾಯತಿಯ ಸದಸ್ಯರು ಉಪಸ್ಥಿತರಿದ್ದರು.

# ಓದುಗರ ಸಂಖ್ಯೆ ಕ್ಷೀಣ ; ಸಾಹಿತಿಗಳ ಆತಂಕ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಸಾಹಿತಿಗಳು ಇಷ್ಟಪಟ್ಟು ಬರೆದು, ಕಷ್ಟಪಟ್ಟು ಮುದ್ರಿಸಿ ಪುಸ್ತಕಗಳನ್ನು ಹೊರತರುತ್ತಾರೆ. ಆದರೆ ಆ ಪುಸ್ತಕಗಳನ್ನು ಕೊಂಡು ಓದುವ ಓದುಗರ ಸಂಖ್ಯೆ ದಿನದಿಂದ ದಿನಕ್ಕೆ ಕ್ಷೀಣಿಸುತ್ತಿರುವುದು ಸಾಹಿತಿಗಳ ಆತಂಕಕ್ಕೆ ಕಾರಣವಾಗಿದೆ ಎಂದು ಹಿರಿಯ ಸಾಹಿತಿ ಡಾ.ಸತ್ಯಾನಂದ ಪಾತ್ರೋಟ ಕಳವಳ ವ್ಯಕ್ತಪಡಿಸಿದರು.

ತಾಲೂಕಿನ ಅಮರಗೋಳ ಗ್ರಾಮದಲ್ಲಿ ಬಾವೈಕ್ಯ ಸಾಹಿತ್ಯ ವೇದಿಕೆ, ಡಾ.ಸಿಂಪಿಲಿಂಗಣ್ಣ ಸಾಹಿತ್ಯ ವೇದಿಕೆ ಹಾಗೂ ಗ್ರಾಮಸ್ಥರ ಸಹಯೋಗದಲ್ಲಿ ದಿ.ಮಲಕಣ್ಣ ಮಾಸ್ತರ ಇವರ 7ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ದತ್ತಿ ಕಾರ್ಯಕ್ರಮದಲ್ಲಿ "ಸಾಹಿತ್ಯ ರತ್ನ" ಪ್ರಶಸ್ತಿ ಸ್ವೀಕರಿಸಿ ಅವರು ಮಾತನಾಡಿದರು.

ಇಂದಿನ ಮೊಬೈಲ್ ಹಾಗೂ ಟಿ.ವ್ಹಿ. ಹಾವಳಿಗೆ ಸಿಲುಕಿ ಪುಸ್ತಕಗಳು ಓದುಗರ ಕೈಯಲ್ಲಿರದೆ ಗೆದ್ದಲು ಹತ್ತುತ್ತಿರುವುದು ವಿಷಾದನೀಯ. ಬಡತನದ ಬವಣೆಯಲ್ಲಿ ನೊಂದು ಬೆಂದು ಕಷ್ಟದಲ್ಲಿಯೇ ಕೈತೊಳೆದುಕೊಂಡು ಜೀವನ ಸಾಗಿಸಿದ್ದ ಅದೆಷ್ಟೋ ಸಾಹಿತಿಗಳಿಗೆ ಕೈ ಹಿಡಿದದ್ದೇ ಸಾಹಿತ್ಯ ಕ್ಷೇತ್ರ. ಇತ್ತೀಚಿನ ದಿನಮಾನಗಳಲ್ಲಿ ಪುಸ್ತಕಗಳನ್ನು ಕೊಂಡು ಓದುವವರ ಸಂಖ್ಯೆ ಕಡಿಮೆಯಾಗುತ್ತಿರುವದರಿಂದ ಬಡಸಾಹಿತಿಗಳ ಬದುಕು ಗಂಭೀರ ಹಂತ ತಲುಪಿದೆ. ಪುಸ್ತಕಗಳನ್ನು ಕೊಂಡುಕೊಂಡು ಓದುವ ಹವ್ಯಾಸವನ್ನು ಪ್ರತಿಯೊಬ್ಬ ಓದುಗರು ಬೆಳಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಅಶೋಕ ಮಣಿ ಮಾತನಾಡಿ ಮಲಕಣ್ಣ ಮಾಸ್ತರರು ಆದರ್ಶ ಶಿಕ್ಷಕರಾಗಿ, ಶ್ರೇಷ್ಠ ಸಾಹಿತಿಗಳಾಗಿ ಖ್ಯಾತರಾದರಷ್ಟೇ ಅಲ್ಲ. ಹಿಂದು–ಮುಸ್ಲೀಂ ಭಾವೈಕ್ಯತೆಯ ಕೊಂಡಿಯಾಗಿ ಸಾಮರಸ್ಯ ಮೂಡಿಸಿ, ಜನಮಾನಸದಲ್ಲಿ ಬೆರೆತು ಹೋಗಿದ್ದಾರೆ. ಮಲಕಣ್ಣ ಮಾಸ್ತರರು ರಚಿಸಿರುವ ಇನ್ನೂ ಹಲವಾರು ಅಪ್ರಕಟಿತ ಕೃತಿಗಳಿವೆ. ಮುಂದಿನ ದಿನಮಾನಗಳಲ್ಲಿ ಅವುಗಳನ್ನು ಮಲಕಣ್ಣ ಮಾಸ್ತರ ಅಮರಗೋಳ ಭಾವೈಕ್ಯತಾ ವೇದಿಕೆ ಹಾಗೂ ಡಾ.ಸಿಂಪಿಲಿಂಗಣ್ಣ ಸಾಹಿತ್ಯ ವೇದಿಕೆಯ ಮುಖಾಂತರ ಪ್ರಕಟಿಸಿ ಹೊರತರುವ ಯೋಜನೆ ಇದೆ ಎಂದರು.

ಮಲಕಣ್ಣ ಮಾಸ್ತರರ ಬದುಕು ಬರಹ ಕುರಿತು ವಿಜಯಪುರದ ಉಪನ್ಯಾಸಕ ಪ್ರೊ. ಯು.ಎನ್.ಕುಂಟೋಜಿ ಮಾತನಾಡಿದರು.

ತಂಗಡಗಿಯ ಪೂಜ್ಯ ಅನ್ನದಾನಿ ಭಾರತಿ ಅಪ್ಪಣ್ಣ ಮಹಾಸ್ವಾಮಿಗಳು ಕಾರ್ಯಕ್ರಮದ ದ